ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೬

ಪಟ್ಟಿ – ೦೫

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತನೆಯ ಅಧಿವೇಶನ
(ಮುಂದುವರೆದ ಉಪವೇಶನ)

**ಸೋಮವಾರ, ದಿನಾಂಕ : ೨೧ನೇ ಮಾರ್ಚ್, ೨೦೧೬**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಸಾರಿಗೆ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು.

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು.

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

F-1

## ಬಿ.ಎಡ್., ಪದವಿ ಪಡೆದು ಹಾಸ್ಟೆಲ್ ವಾರ್ಡನ್‌ಗಳಾಗಿ ಕಾರ್ಯನಿರ್ವಹಿಸುತ್ತಿರುವ ನೌಕರರ ವೇತನ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :-**

೩೮೫ (೫೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಎಡ್., ಪದವಿ ಪಡೆದು ಹಾಸ್ಟೆಲ್ ವಾರ್ಡನ್‌ಗಳಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಪ್ರೌಢ ಶಾಲೆ ಶಿಕ್ಷಕರ ವೇತನ ಶ್ರೇಣಿಗೂ, ಬಿ.ಎಡ್., ವಿದ್ಯಾಭ್ಯಾಸ ಮುಗಿಸಿ ವಾರ್ಡನ್‌ಗಳಾಗಿರುವ ಸಿಬ್ಬಂದಿಗಳ ವೇತನ ಶ್ರೇಣಿಗೂ ವ್ಯತ್ಯಾಸವಿದೆಯೇ ? (ಹೋಲಿಕೆ ಮಾಡಿ ತುಲನಾತ್ಮಕ ವಿವರ ನೀಡುವುದು)

## "೧೦೮" ಅಂಬುಲೆನ್ಸ್ ನೌಕರರ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :-**

೩೮೬ (೫೪೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೧೦೮ ಅಂಬುಲೆನ್ಸ್ ನೌಕರರು ತಮ್ಮ ಬೇಡಿಕೆಗಳನ್ನು ಇಟ್ಟುಕೊಂಡು ಮುಷ್ಕರ ನಡೆಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಎಷ್ಟು ದಿನಗಳಿಂದ ಮುಷ್ಕರ ನಡೆಸುತ್ತಿದ್ದಾರೆ ; ಇವರುಗಳ ಬೇಡಿಕೆಗಳೇನು ;

(ಇ) ೧೦೮ ಅಂಬುಲೆನ್ಸ್ ಸೇವೆಯನ್ನು ಯಾವ ಸಂಸ್ಥೆಯು ಯಾವಾಗಿನಿಂದ ನಡೆಸಿಕೊಂಡು ಬಂದಿದೆ ; ಯಾವ ಅವಧಿಯವರೆಗೆ ಮತ್ತು ಯಾವ ಮಾನದಂಡಗಳನ್ನು ವಿಧಿಸಿ

ಗುತ್ತಿಗೆ ನೀಡಲಾಗಿದೆ ; ಗುತ್ತಿಗೆಯು ನವೀಕರಣದ ನಿಯಮಾವಳಿಗಳೇನು ;

(ಈ) ರಾಜ್ಯದ ೧೦೮ ಅಂಬುಲೆನ್ಸ್ ಸೇವೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ (ಹುದ್ದೆವಾರು) ಸಂಖ್ಯೆ ಎಷ್ಟು ; ಪ್ರಸ್ತುತ ಎಷ್ಟು ಜನ ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಲಾಗಿದೆ ; ಇದಕ್ಕೆ ಕಾರಣಗಳೇನು ;

(ಉ) ಸಿಬ್ಬಂದಿ ವರ್ಗ ಮತ್ತು ಸಂಸ್ಥೆಯ ನಡುವಿನ ಘರ್ಷಣೆಗೆ ಕಾರಣಗಳೇನು ; ಈ ಘರ್ಷಣೆಯನ್ನು ನಿವಾರಿಸಲು ಹಾಗೂ ಅಮಾನತ್ತುಗೊಂಡ ನೌಕರರನ್ನು ಮರು ಸೇರ್ಪಡಿಸಿಕೊಳ್ಳುವುದಕ್ಕೆ ಹಾಗೂ ನೌಕರರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ತೆಗೆದುಕೊಂಡ ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳೇನು ; (ವಿವರ ನೀಡುವುದು)

(ಊ) ಈ ಸಂಸ್ಥೆಯವರ ವಿರುದ್ಧ ಕ್ರಮಕೈಗೊಂಡು ಬೇರೆ ಸಂಸ್ಥೆಯೊಂದಿಗೆ ಈ ೧೦೮ ಅಂಬುಲೆನ್ಸ್ ಸೇವೆಯನ್ನು ನಡೆಸಲು ಸರ್ಕಾರ ಕ್ರಮಕೈಗೊಳ್ಳುವುದೆ ಅಥವಾ ಸರ್ಕಾರವೇ ಈ ಸಂಸ್ಥೆಯನ್ನು ನಡೆಸಿಕೊಂಡು ಹೋಗುವ ಉದ್ದೇಶ ಹೊಂದಿದೆಯೇ ?

## ಜಾತಿ ಪ್ರಮಾಣ ಪತ್ರ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೩೮೭ (೫೪೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಟೋಕರೆ ಕೋಳಿ, ಕೋಳಿ ಡೋರ, ಕೋಯಾ ಎಂಬ ಪದಗಳು ಪರಿಶಿಷ್ಟ ಪಂಗಡ ಜಾತಿಯ ಪಟ್ಟಿಯಲ್ಲಿವೆಯೇ ; ರಾಜ್ಯದಲ್ಲಿರುವ

ಸದರಿ ಸಮುದಾಯದ ಒಟ್ಟು ಜನಸಂಖ್ಯೆ ಎಷ್ಟು ; ಸಂವಿಧಾನ ಬದ್ಧ ಸೌಲಭ್ಯಗಳನ್ನು ಹಾಗೂ ಜಾತಿ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆಯೇ ;

(ಆ) ಯಾವ ಯಾವ ಜಿಲ್ಲೆಯಲ್ಲಿನ ಈ ಜನಾಂಗಕ್ಕೆ ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆ ; ಸಮುದಾಯದ ಜನರು ಹಾಗೂ ಸಂವಿಧಾನ ಬದ್ಧವಾದ ಶೆಡ್ಯೂಲ್ ಕ್ಯಾಸ್ಟ್ ಪಟ್ಟಿಯಲ್ಲಿ ಹೆಸರಿಸಿರುವ ಪರಿಶಿಷ್ಟ ಪ್ರಮಾಣ ಪತ್ರ ವಿತರಣೆ ಆಯಾ ಸಮುದಾಯದ ಜನರಿಗೆ ನೀಡಲಾಗುತ್ತಿದೆಯೇ ;

(ಇ) ವಿಜಯಪುರ ಜಿಲ್ಲೆಯ ಕೆಲವು ಜನರ ಶಾಲೆ ದಾಖಲಾತಿಯಲ್ಲಿ ಟೋಕರೆ ಕೋಳಿ ಎಂದು ನಮೂದಾಗಿದ್ದರೂ ಕೂಡ ಆ ವ್ಯಕ್ತಿಗಳಿಗೆ ಪ್ರಮಾಣ ಪತ್ರ ನೀಡದಿರಲು ಕಾರಣವೇನು ;

(ಈ) ಕಳೆದ ಜನವರಿ ಮಾಹೆಯ ೦೨ನೇ ತಾರೀಖಿನಂದು ಹೊರಡಿಸಲಾದ ಸರ್ಕಾರದ ಸುತ್ತೋಲೆಗಳಲ್ಲಿ ಪ್ರಮಾಣ ಪತ್ರವನ್ನು ಬೇಡುವ ವ್ಯಕ್ತಿಯ ಯಾವ ಯಾವ ದಾಖಲೆ ಪರಿಶೀಲಿಸಿ ಪ್ರಮಾಣ ಪತ್ರ ನೀಡಲು ಆದೇಶಿಸಲಾಗಿದೆ ; ಇದನ್ನು ಎಲ್ಲಾ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗಿದೆಯೇ ; ತಂದಿದ್ದರೆ ಈ ನಿಯಮಗಳ ಪಾಲನೆ ಮಾಡಿ, ಸದರಿ ಜಾತಿ ಪ್ರಮಾಣ ಪತ್ರ ನೀಡಲಾಗಿದೆಯೇ ;

(ಉ) ಈ ಕುರಿತು ವಿಜಯಪುರ ಜಿಲ್ಲೆಯ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಹಿತರಕ್ಷಣಾ ಸಮಿತಿಯವರು ಖಾಸಗಿಯಾಗಿ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿದ ಅರ್ಜಿಯ ವಿಚಾರಣೆಯಲ್ಲಿ ಸದರಿ ಟೋಕರೆ ಕೋಳಿ ಪರ್ಯಾಯ ಪದಗಳು

ಅಂಬಿಗ, ಕಬ್ಬಲಿಗ, ತಳವಾರ, ಕೋಳಿ ಎಂಬ ಪದಗಳಿಗೆ ಸಮಾನಾರ್ಥಕ ಪದಗಳು ಎಂದು ಇಲಾಖಾ ಪ್ರಧಾನ ಕಾರ್ಯದರ್ಶಿಗಳಿಗೆ ಸೂಚಿಸಿದ್ದರೂ ನ್ಯಾಯಾಲಯದ ಆದೇಶವನ್ನು ಪಾಲಿಸದಿರಲು ಕಾರಣವೇನು ;

(ಊ) ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಟೋಕರೆ ಕೋಳಿ, ಜಾತಿ ಪ್ರಮಾಣ ಪತ್ರವನ್ನು ಬೇಡಿದರೆ ವಿತರಿಸಲು ಯಾವುದಾದರೂ ಕಾನೂನಾತ್ಮಕ ಹೋರಾಟದ ಅಡೆ ತಡೆಗಳು ಇದೆಯೇ ; ಇಲ್ಲವಾದಲ್ಲಿ ಜಾತಿ ಪ್ರಮಾಣ ಪತ್ರವನ್ನು ನೀಡಲು ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ ಮತ್ತು ತೆಗೆದುಕೊಳ್ಳಲಾಗುತ್ತಿದೆ ?

## ವಿಜಯಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಮೊರಾರ್ಜಿ ವಸತಿ ಶಾಲೆಗಳ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೩೮೮ (೫೪೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಮೊರಾರ್ಜಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಷಯವಾರು ಶಿಕ್ಷಕರ ಹೆಸರು, ವಿಳಾಸ ಹಾಗೂ ದೂರವಾಣಿ ಸಂಖ್ಯೆ ಸಹಿತ ವಿವರ ನೀಡುವುದು ?

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯ ಟೆಂಡರ್‌ಗಳ ಕುರಿತು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :–**

೩೮೯ (೫೪೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮೊರಾರ್ಜಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳ ಸಂಖ್ಯೆ ಎಷ್ಟು ; ಅಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಅಲ್ಲಿ ಇರುವಂತಹ ಖಾಯಂ ಹಾಗೂ ತಾತ್ಕಾಲಿಕ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಸ್ವಂತ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಶಾಲೆಗಳ ಎಷ್ಟು ; ಬಾಡಿಗೆ ಕಟ್ಟಡ ಅಥವಾ ತಾತ್ಕಾಲಿಕ ಕಟ್ಟಡದ ವ್ಯವಸ್ಥೆಯಲ್ಲಿರುವಂತಹ ಶಾಲೆಗಳ ಸಂಖ್ಯೆ ಎಷ್ಟು;

(ಇ) ಕಳೆದ ಒಂದು ವರ್ಷದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಂಸ್ಥೆಯಿಂದ ಕರೆದಿರುವ ಟೆಂಡರ್‌ಗಳು ಎಷ್ಟು ; (ಪ್ರತಿಯೊಂದರ ವಿವರ ನೀಡುವುದು)

(ಈ) ಇಡೀ ವ್ಯವಸ್ಥೆಯನ್ನು ಕ್ರೈಸ್ (KRIES) ಸಂಸ್ಥೆಯಿಂದ ನಿರ್ವಹಣೆ ಮಾಡಲು ಸಾಧ್ಯವೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ೧೦೮ ಅಂಬ್ಯುಲೆನ್ಸ್ ಮತ್ತು ಸಿಬ್ಬಂದಿಗಳ ಬಗ್ಗೆ

**ಶ್ರೀ ಅಶ್ವತನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೯೦ (೫೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೦೮ ಅಂಬ್ಯುಲೆನ್ಸ್ ಸೇವೆಗಾಗಿ ಇರುವ ವಾಹನಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೧೦೮ ಅಂಬ್ಯುಲೆನ್ಸ್ ಸೇವೆ ಕೇಂದ್ರ ಸರ್ಕಾರದಿಂದ ನೀಡುತ್ತಿರುವ ಯೋಜನೆಯೇ ; ಇದಕ್ಕಾಗಿ ಕೇಂದ್ರ ಸರ್ಕಾರದಿಂದ ೧೦೮ ಅಂಬುಲೆನ್ಸ್‌ಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ; ಯಾವ ಯಾವ ಬಾಬ್ತುಗಾಗಿ ಹಣ ನೀಡುತ್ತಿದೆ ; (ಉದಾಹರಣೆ : ಚಾಲಕರು, ಸ್ಟಾಫ್ ನರ್ಸ್, ನಿರ್ವಹಣೆ ವೆಚ್ಚ ಇತ್ಯಾದಿ)

(ಇ) ೧೦೮ ಅಂಬುಲೆನ್ಸ್ ವಾಹನ ನಿಲ್ಲಿಸಲು ವಾಹನಕ್ಕಾಗಿ ಶೆಲ್ಟರ್ ನಿರ್ಮಿಸಲು ತೊಂದರೆಯೇನು ; ಮಳೆ–ಬಿಸಿಲಿನಲ್ಲಿಯೇ ವಾಹನ ನಿಲ್ಲಿಸಿರುತ್ತಾರೆ, ಕೆಲವು ಕಡೆ ಒಂದು ವೇಳೆ ನಿಲ್ಲಿಸಲು ಶೆಡ್ ನಿರ್ಮಿಸಿದ್ದರೆ ಎಷ್ಟು ೧೦೮ ವಾಹನಗಳಿಗೆ ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಬಿಡುಗಡೆ ಮಾಡಿದ ಹಣವೆಷ್ಟು ; ಯಾವಾಗ ಬಿಡುಗಡೆ ಮಾಡಲಾಯಿತು ; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಈ) ೨೦೧೪–೧೫ ಹಾಗೂ ೨೦೧೫–೧೬ ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿರುವ ಹಣವೆಷ್ಟು ; ಯಾವ ಯಾವ ಯೋಜನೆಗಳಿಗೆ (ಎನ್.ಆರ್.ಹೆಚ್.ಎಂ.ಸೇರಿ) ಎಷ್ಟು ಹಣವನ್ನು ಬಿಡುಗಡೆ ಮಾಡಿದೆ ? (ವಿವರ ನೀಡುವುದು)

## I.C.U. ಮತ್ತು ವೆಂಟಿಲೇಟರ್ಸ್ ಅಳವಡಿಸುವ ಬಗ್ಗೆ

**ಶ್ರೀ ಅಶ್ವತನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೯೧ (೫೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೫-೧೬ರಲ್ಲಿ ರಾಜ್ಯದ ಎಷ್ಟು ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಐ.ಸಿ.ಯು. ಮತ್ತು ವೆಂಟಿಲೇಟರ್ಸ್‌ಗಳನ್ನು ಅಳವಡಿಸಿ ಬಡರೋಗಿಗಳಿಗೆ ಅನುಕೂಲ ಮಾಡಿಕೊಡಲಾಗಿದೆ ; (ಜಿಲ್ಲಾ ಹಾಗೂ ತಾಲ್ಲೂಕುವಾರು ವಿವರ ನೀಡುವುದು) ಇದಕ್ಕಾಗಿ ಸರ್ಕಾರ ಖರ್ಚು ಮಾಡಿದ ಹಣವೆಷ್ಟು ;

(ಆ) ಹೊಸದಾಗಿ ಐ.ಸಿ.ಯು. ಮತ್ತು ವೆಂಟಿಲೇಟರ್ ವ್ಯವಸ್ಥೆ ಮಾಡಿದ ಆಸ್ಪತ್ರೆಗಳಲ್ಲಿ ಐ.ಸಿ.ಯು. ನಲ್ಲಿ ರೋಗಿಗಳು ಇದ್ದ ಸಮಯದಲ್ಲಿ ಉಪಚರಿಸಲು ನುರಿತ ವೈದ್ಯರು ಹಾಗೂ ಶುಶ್ರೂಷಕರನ್ನು ನೇಮಿಸಿಕೊಳ್ಳಲಾಗುವುದೇ ; ಹಾಗಿದ್ದಲ್ಲಿ, ನೇಮಕಗೊಂಡ ವೈದ್ಯರು ಹಾಗೂ ಶುಶ್ರೂಷಕರ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಅಶ್ವತನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):-**

೩೯೨ (೫೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ ಹಾಗೂ ೨೦೧೫-೧೬ ರಲ್ಲಿ ರಾಜ್ಯ ಸರ್ಕಾರ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಹಣವೆಷ್ಟು ;

ಸಾರಿಗೆ ಇತರೆ ಹೊರತುಪಡಿಸಿ ಬಿಡುಗಡೆ ಮಾಡಿದ ಹಣದಲ್ಲಿ ಆಡಳಿತ ಸಿಬ್ಬಂದಿ ವೆಚ್ಚವೆಷ್ಟು ;

(ಆ) ಕಲ್ಯಾಣ ಕಾರ್ಯಕ್ರಮ ಯೋಜನೆಗಳಿಗೆ, ಖರ್ಚಾದ ಹಣವೆಷ್ಟು; ಪರಿಶಿಷ್ಟ ಜಾತಿ, ಪಂಗಡದವರಿಗೆ, ವಸತಿ ನಿಲಯಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು ; ಎಷ್ಟು ವಸತಿ ಮನೆ ನಿರ್ಮಾಣ ಮಾಡಲಾಗಿದೆ ; ಖರ್ಚಾದ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ೨೦೧೪-೧೫ ಮತ್ತು ೨೦೧೫-೧೬ ರಲ್ಲಿ ಕೊರೆದ ಬೋರೆವೆಲ್‌ಗಳು ಎಷ್ಟು ; ಇದರಲ್ಲಿ ಎಷ್ಟು ಕೊಳವೆಬಾವಿಗಳಿಗೆ ವಿದ್ಯುತ್ ಅಳವಡಿಕೆ ಮಾಡಿಕೊಡಲಾಗಿದೆ ; ಇದರ ಫಲಾನುಭವಿಗಳು ಎಷ್ಟು ; ಕೊಳವೆಬಾವಿ ಹಾಗೂ ವಿದ್ಯುತ್ ಉಪಕರಣಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ;

(ಈ) ೨೦೧೪-೧೫ ಹಾಗೂ ೨೦೧೫-೧೬ ರಲ್ಲಿ ಕೇಂದ್ರ ಸರ್ಕಾರದಿಂದ ಸಮಾಜ ಕಲ್ಯಾಣ ಇಲಾಖೆಗೆ ಯಾವ ಯಾವ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಬಿಡುಗಡೆ ಮಾಡಿದ ಹಣವನ್ನು ಯಾವ ಯಾವ ಯೋಜನೆಗೆ ಬಳಸಲಾಗಿದೆ ? (ವರ್ಷಾವಾರು, ಯೋಜನಾವಾರು ವಿವರ ನೀಡುವುದು)

## ೨೦೧೪–೧೫ ಹಾಗೂ ೨೦೧೫–೨೦೧೬ರಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿದ ಹಣದ ಬಗ್ಗೆ

**ಶ್ರೀ ಅಶ್ವತನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೯೩ (೫೬೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ಹಾಗೂ ೨೦೧೫–೨೦೧೬ರಲ್ಲಿ ಆಹಾರ ಭದ್ರತಾ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆ ಮಾಡಿದ ಅಕ್ಕಿಯ ಪ್ರಮಾಣವೆಷ್ಟು ;

(ಆ) ೨೦೧೪–೧೫ರಲ್ಲಿ ರಾಜ್ಯ ಸರ್ಕಾರ ಎ.ಎ.ವೈ. ಹಾಗೂ ಬಿ.ಪಿ.ಎಲ್. ಪಡಿತರದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣವೆಷ್ಟು ;

(ಇ) ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಅಕ್ಕಿಗೆ ರಾಜ್ಯ ಸರ್ಕಾರ ಒಂದು ಕ್ವಿಂಟಾಲ್‌ಗೆ ನೀಡುತ್ತಿರುವ ಹಣವೆಷ್ಟು ; ೨೦೧೪–೧೫ರಲ್ಲಿ ಅಕ್ಕಿಗಾಗಿ ಬಿಡುಗಡೆ ಮಾಡಿದ ಹಣವೆಷ್ಟು ;

(ಈ) ಕೇಂದ್ರ ಸರ್ಕಾರವು ರಾಜ್ಯಕ್ಕೆ ಸಬ್ಸಿಡಿಯುಕ್ತ ಬಿಡುಗಡೆ ಮಾಡುತ್ತಿರುವ ಸೀಮೆಎಣ್ಣೆ ಪ್ರಮಾಣವೆಷ್ಟು ; ಯಾವ ಆಧಾರದ ಮೇಲೆ ಸಬ್ಸಿಡಿಯುಕ್ತ ಸೀಮೆಎಣ್ಣೆ ಬಿಡುಗಡೆ ಮಾಡುತ್ತಿದೆ ; ಪಡಿತರ ಚೀಟಿ ಆಧಾರದ ಮೇಲೆಯೇ ಅಥವಾ ಬೇರೆ ಆಧಾರದ ಮೇಲೆಯೇ ;

(ಉ) ಪಡಿತರದಾರಿಗೆ ನಿಗಧಿ ಮಾಡಿರುವ ಸಬ್ಸಿಡಿಯುಕ್ತ ದರವೆಷ್ಟು ; ಮಾರಾಟ ಮಾಡುತ್ತಿರುವ ದರವೆಷ್ಟು ; ರಾಜ್ಯ ಸರ್ಕಾರದಿಂದ ಪ್ರತಿ ಲೀಟರ್‌ಗೆ ಸಬ್ಸಿಡಿ ಪಾಲೆಷ್ಟು ? (ವಿವರ ನೀಡುವುದು)

## ೨೦೧೪–೨೦೧೫ರಲ್ಲಿ ಬಿಡುಗಡೆ ಮಾಡಿದ ಹಣದ ಬಗ್ಗೆ

**ಶ್ರೀ ಅಶ್ವತನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೯೪ (೫೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೪–೧೫ರಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಂಘ–ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಹಣವೆಷ್ಟು ? (ಹಣ ಪಡೆದ ಸಂಘ–ಸಂಸ್ಥೆಗಳ ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಮಲೆನಾಡು ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರಿಗೆ ಅನುದಾನ ಹಂಚಿಕೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ (ಪದವೀಧರರ ಕ್ಷೇತ್ರ) :–**

೩೯೫ (೫೫೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಲೆನಾಡು ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಮಲೆನಾಡು ಅಭಿವೃದ್ಧಿ ಮಂಡಳಿಯ ೨೦೧೫-೧೬ನೇ ಸಾಲಿನ ಅನುದಾನದಲ್ಲಿ ವಿಧಾನ ಪರಿಷತ್ ಸದಸ್ಯರುಗಳಿಗೆ ಸಮನಾಗಿ ಹಂಚಿಕೆ ಮಾಡಲಾಗಿದೆಯೇ; ಬಂದಂತಹ ಅನುದಾನ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಹಂಚಿಕೆಯಾದ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ೨೦೧೫-೨೦೧೬ನೇ ಸಾಲಿನ ಅನುದಾನದಲ್ಲಿ ವಿಧಾನ ಪರಿಷತ್ ಸದಸ್ಯರುಗಳಿಗೆ ಸಮನಾಗಿ ಹಂಚಿಕೆ ಮಾಡಲಾಗಿದೆಯೇ ; ಮಾಡದೇ ಇದ್ದಲ್ಲಿ, ಸದರಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳು ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಮಂಡಳಿಯಿಂದ ಅನುದಾನ ದೊರಕದೆ ವಂಚಿತರಾಗಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ, ಕಾರಣವೇನು ; (ವಿವರ ನೀಡುವುದು)

(ಉ) ಸದರಿ ಮಂಡಳಿಯ ವ್ಯಾಪ್ತಿಯ ವಿಧಾನ ಪರಿಷತ್ ಸದಸ್ಯರುಗಳಿಗೆ ಅನುದಾನ ಹಂಚಿಕೆ ಪ್ರಕ್ರಿಯೆಯಲ್ಲಿ ತೊಡಗಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ೨೦೧೩-೧೪ ಮತ್ತು ೨೦೧೫-೧೬ನೇ ಸಾಲಿನಲ್ಲಿ ಘೋಷಣೆ ಮಾಡಿದ ಅನುದಾನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೩೯೬ (೫೫೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ೨೦೧೨-೧೩, ೨೦೧೩-೧೪, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿಗೆ ಸರ್ಕಾರದಿಂದ ಘೋಷಣೆ ಮಾಡಿದ ಅನುದಾನ ಎಷ್ಟು; (ವರ್ಷವಾರು ವಿವರ ನೀಡುವುದು)

(ಆ) ಸದರಿ ಮಂಡಳಿಗೆ ಸರ್ಕಾರದಿಂದ ಮೇಲ್ಕಂಡ ಸಾಲಿಗೆ ವಾಸ್ತವಿಕವಾಗಿ ಬಿಡುಗಡೆಯಾದ ಮೊತ್ತ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಸದರಿ ಮಂಡಳಿಯಿಂದ ಅನುಷ್ಠಾನ ಇಲಾಖೆಗೆ ವಾಸ್ತವಿಕವಾಗಿ ಬಿಡುಗಡೆಯಾದ ಮೊತ್ತ ಎಷ್ಟು ; (ಜಿಲ್ಲಾವಾರು, ಅನುಷ್ಠಾನ ಇಲಾಖೆವಾರು, ವರ್ಷವಾರು ವಿವರ ನೀಡುವುದು)

(ಈ) ಸದರಿ ಮಂಡಳಿಯ ಕಾಮಗಾರಿಗಳಿಗಾಗಿ ಅನುಷ್ಠಾನ ಇಲಾಖೆಯಿಂದ ಆದಂತಹ ವೆಚ್ಚ ಎಷ್ಟು ; (ಜಿಲ್ಲಾವಾರು, ಅನುಷ್ಠಾನ ಇಲಾಖೆವಾರು, ವರ್ಷವಾರು ವಿವರ ನೀಡುವುದು)

(ಉ) ಮೇಲ್ಕಂಡ ಸಾಲುಗಳಲ್ಲಿ ಸದರಿ ಮಂಡಳಿಗೆ ಮಂಜೂರಾದ ಕಾಮಗಾರಿಗಳು ಎಷ್ಟು; ಆ ಪೈಕಿ ಪೂರ್ಣಗೊಂಡ ಕಾಮಗಾರಿಗಳು ಎಷ್ಟು ? (ಜಿಲ್ಲಾವಾರು, ಅನುಷ್ಠಾನ ಇಲಾಖೆವಾರು, ವರ್ಷವಾರು ಕಾಮಗಾರಿವಾರು ವಿವರ ನೀಡುವುದು)

## ಕೆ.ಎಸ್.ಆರ್.ಟಿ.ಸಿ.ಸಂಸ್ಥೆಯಲ್ಲಿನ ನೇಮಕಾತಿ ಪ್ರಕ್ರಿಯೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೩೯೭ (೫೫೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ ಹಾಗೂ ೨೦೧೫-೧೬ನೇ ಸಾಲಿನಲ್ಲಿ ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯಲ್ಲಿ ನೇಮಕಾತಿ ಪ್ರಕ್ರಿಯೆ ಕೈಗೊಂಡಿದೆಯೇ ; ಇದ್ದಲ್ಲಿ, ಅಧಿಸೂಚನೆಗಳು ಹಾಗೂ ಹುದ್ದೆಗಳ (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ನೇಮಕಾತಿಗಳಲ್ಲಿ ಸಂವಿಧಾನ ೩೭೧ (ಜೆ) ಅಡಿಯಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ; ಇದ್ದರೆ, ಮೀಸಲಾತಿ ಪ್ರಮಾಣ, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು ;

(ಇ) ಸದರಿ ನೇಮಕಾತಿಯಲ್ಲಿ ಸಂವಿಧಾನದ ೩೭೧ (ಜೆ) ಅಡಿಯಲ್ಲಿ ಮೀಸಲಾತಿ ಕಲ್ಪಿಸದೇ ಇದ್ದಲ್ಲಿ ಯಾವ ಕಾರಣಕ್ಕಾಗಿ ಕಲ್ಪಿಸಿಲ್ಲ ಹಾಗೂ ಈ ನ್ಯೂನ್ಯತೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮಕ್ಕೆಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೯೮ (೫೫೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಡಿಯಲ್ಲಿರುವ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆ ಎಷ್ಟು ಮತ್ತು ಯಾವುವು; ಸದರಿ ವಸತಿ ನಿಲಯಗಳ ಪೈಕಿ ಎಷ್ಟು ವಸತಿ ನಿಲಯಗಳು ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಾಡಿಗೆ ಕಟ್ಟಡದ ವಿದ್ಯಾರ್ಥಿ ವಸತಿ ನಿಲಯಗಳಿಗೆ ಪ್ರತಿ ತಿಂಗಳು ಪಾವತಿಸುವ ಬಾಡಿಗೆ ಮೊತ್ತ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಾಡಿಗೆ ಕಟ್ಟಡಗಳ ಬದಲಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ? (ಮಾಹಿತಿ ನೀಡುವುದು)

## ಹೆಚ್.ಆರ್.ಎಂ.ಎಸ್. ಮೂಲಕ ವೇತನ ಬಟಾವಡೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೩೯೯ (೬೨೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆಚ್.ಆರ್.ಎಂ.ಎಸ್ ಮೂಲಕ ರಾಜ್ಯದ ಯಾವ ಯಾವ ಇಲಾಖೆಗಳ ಸರ್ಕಾರಿ ನೌಕರರಿಗೆ ವೇತನ ಪಾವತಿ ಮಾಡಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೆಚ್.ಆರ್.ಎಂ.ಎಸ್ ಮೂಲಕ ಪಾವತಿ ಮಾಡದೆ ಖಜಾನೆ ಮೂಲಕ ವೇತನ ಪಡೆಯುತ್ತಿರುವ ಇಲಾಖೆಗಳು ಯಾವುವು ; (ಮಾಹಿತಿ ನೀಡುವುದು)

(ಇ) ಯಾವ ಯಾವ ಇಲಾಖೆಗಳಿಗೆ ಹೆಚ್.ಓ.ಡಿ ಹಾಗೂ ನೋಡೆಲ್ ಅಧಿಕಾರಿಗಳನ್ನು ಒದಗಿಸಲಾಗಿದೆ ; (ಮಾಹಿತಿ ನೀಡುವುದು)

(ಈ) ಹೆಚ್.ಓ.ಡಿ ಹಾಗೂ ನೋಡೆಲ್ ಅಧಿಕಾರಿಗಳು ಇಲ್ಲದೆ ಕೇವಲ ವೇತನ ಬಟಾವಡೆ ಮಾಡುವ ಇಲಾಖೆಗಳು ಯಾವುವು; ಹೆಚ್.ಓ.ಡಿ ಹಾಗೂ ನೋಡೆಲ್ ಅಧಿಕಾರಿಗಳು ಇರದೆ ಇರುವ ಇಲಾಖೆಗಳಿಗೆ ಹೆಚ್.ಓ.ಡಿ ಹಾಗೂ ನೋಡೆಲ್ ಅಧಿಕಾರಿಗಳು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಮಾಹಿತಿ ನೀಡುವುದು)

## ಹುಬ್ಬಳ್ಳಿಯ ಕಿಮ್ಸ್ ಆವರಣದಲ್ಲಿ ನಿರ್ಮಿಸಿದ ವಸತಿ ಗೃಹಗಳ ಕಳಪೆ ಕಾಮಗಾರಿಗಳ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೪೦೦ (೪೮೦) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಿಮ್ಸ್ ಸಂಸ್ಥೆಯ ಆವರಣದಲ್ಲಿ "ಚರಕ" ಮತ್ತು "ಸುಶೃತ" ಹೆಸರಿನ ವಿದ್ಯಾರ್ಥಿಗಳ ವಸತಿ ಗೃಹ ಕಟ್ಟಡಗಳನ್ನು ನಿರ್ಮಿಸಿರುವುದು ನಿಜವೇ ;

(ಆ) ಎರಡು ವಸತಿ ಕಟ್ಟಡಗಳನ್ನು ನಿರ್ಮಿಸಲು ತಗಲಿದ ವೆಚ್ಚವೆಷ್ಟು; ಯಾವ ಇಲಾಖೆಯ ಉಸ್ತುವಾರಿಯಲ್ಲಿ ಈ ಕಟ್ಟಡಗಳನ್ನು ನಿರ್ಮಿಸಲಾಗಿದೆ ;

(ಇ) ಸದರಿ ವಸತಿ ಕಟ್ಟಡಗಳ ನಿರ್ಮಾಣ ಕಾಮಗಾರಿಯು ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ವಸತಿ ಕಟ್ಟಡಗಳ ಕಿಟಕಿ, ಬಾಗಿಲುಗಳು, ಸ್ನಾನಗೃಹಗಳು ಎಲ್ಲವೂ ದುರಸ್ತಿಗೊಳಿಸದೇ ಇರುವುದರಿಂದ ಅಲ್ಲಿರುವ ವಿದ್ಯಾರ್ಥಿಗಳಿಗೆ ದಿನನಿತ್ಯ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರಿಪಡಿಸಲು ತಕ್ಷಣ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ಈ ಕಟ್ಟಡಗಳನ್ನು ನಿರ್ಮಿಸಿರುವ ಗುತ್ತಿಗೆದಾರರು ಯಾರು; ಕಾಮಗಾರಿಗಳ ಕಳಪೆಗೆ ಕಾರಣರಾದ ಗುತ್ತಿಗೆದಾರರು ಮತ್ತು ಉಸ್ತುವಾರಿ ಅಧಿಕಾರಿಗಳ ಮೇಲೆ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ ?

## ವಿಜಯಪುರ ಜಿಲ್ಲಾ ಆಸ್ಪತ್ರೆ ಕುರಿತು

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೦೧ (೪೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಒಟ್ಟು ಆಸ್ತಿ ಎಷ್ಟು; ಅದು ಅತಿಕ್ರಮಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಆ) ವಿಜಯಪುರ ಜಿಲ್ಲಾ ಆಸ್ಪತ್ರೆಯ ಅವರಣದಲ್ಲಿ ಮೋತಿಗುಂಬಜ ಎಂಬ ಪುರಾತನ ಸ್ಮಾರಕದ ಹತ್ತಿರ ಜಾಗದಲ್ಲಿ ಖಾಸಗಿಯವರು

ಅತಿಕ್ರಮಣ ಮಾಡಿ ಮನೆಗಳನ್ನು ನಿರ್ಮಿಸಿದ್ದು ತನಿಖೆ ಮಾಡಿ ತೆರವುಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಇ) ಜಿಲ್ಲಾ ಆಸ್ಪತ್ರೆ ಸಂಪೂರ್ಣ ಜಾಗವನ್ನು ಭೂಮಾಪನ ಮಾಡಿ ಸರಹದ್ದುಗಳನ್ನು ಗುರುತಿಸಿ ಉಳಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಭಾಗ್ಯ ಲಕ್ಷ್ಮಿ ಯೋಜನೆ

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೦೨ (೪೮೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಭಾಗ್ಯಲಕ್ಷ್ಮಿ ಯೋಜನೆ ಯಡಿಯಲ್ಲಿ ನೀಡಿದ ಸೌಲಭ್ಯಗಳೇಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಭಾಗಲಕ್ಷ್ಮಿ ಯೋಜನೆಯಡಿ ಸರಕಾರ ದಿಂದ ಮಂಜೂರಾದ ಅನುದಾನ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ವಿದ್ಯಾರ್ಥಿನಿಲಯಗಳ ಬಗ್ಗೆ

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೦೩ (೪೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಈ ವಿದ್ಯಾರ್ಥಿ

ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ವಿದ್ಯಾರ್ಥಿನಿಲಯಗಳಿಗಾಗಿ ಸರ್ಕಾರದಿಂದ ಮಂಜೂರಾದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಿದ್ಯಾರ್ಥಿಗಳಿಗೆ ಪೂರೈಕೆ ಮಾಡುತ್ತಿರುವ ಆಹಾರ ಸರಬರಾಜುದಾರರಿಗೆ ಸರ್ಕಾರ ಯಾವ ನಿಬಂಧನೆ ವಿಧಿಸಿದೆ ಕಳಪೆ ಮಟ್ಟದ ಆಹಾರ ಪೂರೈಕೆಯಾಗುತ್ತಿರುವುದು ಮತ್ತು ಮೂಲಭೂತ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಡಾ : ಡಿ.ಎಂ. ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ಖರ್ಚು ಮಾಡಿದ ಅನುದಾನದ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೪ (೫೯೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ : ಡಿ.ಎಂ. ನಂಜುಂಡಪ್ಪ ವರದಿ ಪ್ರಕಾರ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ೨೦೧೫–೨೦೧೬ನೇ ಸಾಲಿನಲ್ಲಿ ಖರ್ಚು ಮಾಡಿದ ಹಣ ಎಷ್ಟು ;

(ಆ) ಹೈದರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ (H.K.RDB) ೨೦೧೪–೧೫ ಹಾಗೂ ೨೦೧೫–೨೦೧೬ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ಇಲ್ಲಿಯವರೆಗೂ ಖರ್ಚು ಮಾಡಿದ ಹಣ ಎಷ್ಟು ?

**ರಾಯಚೂರು ಜಿಲ್ಲೆಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ.**

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೫(೫೯೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ತಾಲ್ಲೂಕಿನ ಕಲುತಾಳ ಗ್ರಾಮಕ್ಕೆ (SC/ST) ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಕಟ್ಟಡ ನಿರ್ಮಾಣ ಮಾಡುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ೨೦೧೫–೨೦೧೬ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಪ್ರಾರಂಭಿಸಿರುವ ವಸತಿ ಶಾಲೆಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪ್ರಾರಂಭಿಸುವ ಬಗ್ಗೆ.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೬(೫೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾನ್ವಿ ತಾಲ್ಲೂಕಿನ ಪೋತ್ನಾಳ (Pothanal) ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಘಟನೆಯಿಂದ ಆರೋಗ್ಯ ಕೇಂದ್ರ ಪೂರ್ತಿ ಮುಚ್ಚಲ್ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಪೂರ್ತಿ ಪ್ರಮಾಣದ ಆರೋಗ್ಯ ಕೇಂದ್ರ ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಜಿಲ್ಲಾ ತಾಲ್ಲೂಕು ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; ಹಾಗಿದ್ದಲ್ಲಿ, ಇಲ್ಲಿವರೆಗೂ ಎಷ್ಟು ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ?

## ರಾಯಚೂರು ನಗರದಲ್ಲಿರುವ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಬಗ್ಗೆ.

**ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೪೦೭ (೫೯೪) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿರುವ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಪೂರ್ತಿ ಪ್ರಮಾಣದಲ್ಲಿ ಆಸ್ಪತ್ರೆ ಉಪಯೋಗವಾಗಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಸಿಬ್ಬಂದಿಗಳಿಗೆ ವೇತನ ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ವಸತಿ ಶಾಲೆಗಳ ಶಿಕ್ಷಕರುಗಳ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೦೮ (೬೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಘದ ವತಿಯಿಂದ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರನ್ನು ಆಯ್ಕೆ ಮಾಡಿ ಯಾವಾಗ ಅಂತಿಮ ಆಯ್ಕೆ ಪಟ್ಟಿ ಹೊರಡಿಸಲಾಯಿತು ;

(ಆ) ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡ ಎಷ್ಟು ಜನ ಸಿಬ್ಬಂದಿ/ ಶಿಕ್ಷಕರನ್ನು ಅಂತಿಮ ಆಯ್ಕೆ ಪಟ್ಟಿಯಿಂದ ಕೈಬಿಡಲಾಗಿದೆ ; (ಅಭ್ಯರ್ಥಿ ಹೆಸರು, ವಿಳಾಸ, ಆಯ್ಕೆ ಪಟ್ಟಿಯಿಂದ ಕೈಬಿಡಲು ಸಕಾರಣಗಳು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಸಾರ್ವತ್ರಿಕ ರಜೆ ಇದ್ದಾಗ ಶಾಲೆಯ ಗುತ್ತಿಗೆ ಶಿಕ್ಷಕರು ಶಾಲೆಯ ಹಾಜರಾತಿ ಪುಸ್ತಕದಲ್ಲಿ ಖಾಯಂ ಸಿಬ್ಬಂದಿ ಸಹಿ ಹಾಕಿದ ನಂತರ ಸಹಿ ಮಾಡಿರುವುದು ಕ್ರಿಮಿನಲ್ ಅಪರಾಧವೇ ?

## ಎನ್.ಪಿ.ಎಸ್. ಪಿಂಚಣಿ ಯೋಜನೆಯ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೨೯ (೬೧೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಸಂಸ್ಥೆಯಲ್ಲಿ ಹಾಲಿ ಎಷ್ಟು ಜನ ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ ;

(ಆ) ಸದರಿ ನೌಕರರಿಗೆ ಎನ್.ಪಿ.ಎಸ್ ಪಿಂಚಣಿ ಯೋಜನೆಯನ್ನು ಯಾವಾಗಿನಿಂದ ಅಳವಡಿಸಲಾಗಿದೆ ;

(ಇ) ಒಂದು ತಿಂಗಳಿಗೆ ಎನ್.ಪಿ.ಎಸ್. ಪಿಂಚಣಿ ಯೋಜನೆಯಡಿ ಎಷ್ಟು ಹಣವನ್ನು ನೌಕರರಿಂದ ಪಡೆದುಕೊಂಡು ಮತ್ತು ಎಷ್ಟು ಹಣವನ್ನು ಸಂಸ್ಥೆಯು ಹಾಕಿ ಯಾವ ಯೋಜನೆಯಡಿ ಹೂಡಿಕೆ ಮಾಡಲಾಗುತ್ತಿದೆ ? (ನೌಕರರ ಹೆಸರು ಕಡಿತಗೊಳಿಸಿದ ಹಣ ವಿವರಗಳೊಂದಿಗೆ ಮಾಹಿತಿ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿಯ ಕಾಮಗಾರಿಗಳು.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೧೦(೬೧೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಸಾಲಿಗೆ ಬಯಲು ಸೀಮೆ ಅಭಿವೃದ್ಧಿ ಮಂಡಳಿಯು ಕಾಮಗಾರಿಗಳಿಗಾಗಿ ಮೀಸಲಿಟ್ಟಿರುವ ಹಣ ಎಷ್ಟು ;

(ಆ) ಆ ಪೈಕಿ ಖರ್ಚಾದ ಹಣ ಎಷ್ಟು ; ಎಷ್ಟು ಬಾಕಿ ಇದೆ ;

(ಇ) ಕಾಮಗಾರಿಗಳಿಗೆ ಮೀಸಲಿಟ್ಟ ಹಣದಲ್ಲಿ ಮಂಡಳಿಯ ಅಧಿಕಾರಿಗಳ ವಿವೇಚನೆಗೆ ಎಷ್ಟು ಹಣ ನೀಡಲಾಗಿದೆ ; ಈ ಹಣದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಈ) ಮಂಡಳಿಯ ಅಧಿಕಾರಿಗಳ ವಿವೇಚನೆಗಾಗಿ ಹಣ ನಿಗಧಿಗೊಳಿಸುವ ಪದ್ಧತಿಯು ಯಾವಾಗಿನಿಂದ ಜಾರಿಗೊಳಿಸಲಾಗಿದೆ ?

## ಕಿಯೋನಿಕ್ಸ್ ನಿಗಮದ ಕೇಂದ್ರ ಕಛೇರಿ ಸ್ಥಳಾಂತರಿಸುವ ಬಗ್ಗೆ.

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೪೧೧(೬೧೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಿಯೋನಿಕ್ಸ್ ನಿಗಮದ ಕೇಂದ್ರ ಕಛೇರಿಯನ್ನು ಯಾವಾಗ ಶಾಂತಿ ನಗರದ ಬಿ.ಎಂ.ಟಿ.ಸಿ. ಕಟ್ಟಡಕ್ಕೆ ಸ್ಥಳಾಂತರಿಸಲಾಯಿತು ; ಸ್ಥಳಾಂತರಿಸಲು ಕಾರಣಗಳೇನು ;

(ಆ) ಸದರಿ ನಿಗಮದ ಕೇಂದ್ರ ಕಛೇರಿಯ ಒಳಾಂಗಣ ವಿನ್ಯಾಸ ಕಾಮಗಾರಿಗೆ ಖರ್ಚು ಮಾಡಲಾದ ಹಣ ಎಷ್ಟು ; (ಸಾಮಗ್ರಿವಾರು ವಿವರವಾದ ಮಾಹಿತಿ ಕೊಡುವುದು)

(ಇ) ಹಾಲಿ ನಿಗಮದ ಕೇಂದ್ರ ಕಛೇರಿಯಲ್ಲಿ ಎಷ್ಟು ಜನ ಸಿಬ್ಬಂದಿ ಕೆಲಸ ನಿರ್ವಹಿಸುತ್ತಿದ್ದಾರೆ ? (ಕ್ರಮವಾಗಿ ಅವರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ ತಿಂಗಳಿಗೆ ಪಡೆಯುತ್ತಿರುವ ಒಟ್ಟು ವೇತನ, ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ವಿವರವಾದ ಮಾಹಿತಿ ಕೊಡುವುದು)

## ಸ್ಥಳೀಯ ಸಂಸ್ಥೆಗಳ ಸದಸ್ಯರುಗಳಿಗೆ ಬಸ್‌ಪಾಸ್ ನೀಡುವ ಬಗ್ಗೆ.

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೨(೫೭೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ಸದಸ್ಯರುಗಳಿಗೆ ತಮ್ಮ ಕ್ಷೇತ್ರಗಳಲ್ಲಿ ಓಡಾಡಲು ಬಸ್ ಪಾಸ್‌ಗಳನ್ನು ನೀಡುವ ಆಲೋಚನೆ ಸರ್ಕಾರಕ್ಕಿದೆಯೇ ;

(ಆ) ಸಾರ್ವಜನಿಕ ಕೆಲಸ ಕಾರ್ಯಗಳಿಗಾಗಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಓಡಾಡಲು ಬಸ್‌ಪಾಸ್ ನೀಡಬೇಕೆಂಬ ಬೇಡಿಕೆಯನ್ನು ಪರಿಶೀಲಿಸಿ ಜಾರಿಗೆ ತರಲಾಗುವುದು ;

(ಇ) ಎಷ್ಟು ದಿವಸಗಳಲ್ಲಿ ಜಾರಿಗೆ ತರಲಾಗುವುದು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮಗಳು.

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೩(೫೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚಿನ ದಿನಗಳಲ್ಲಿ ಜಾನಪದ ಕಲೆ ಮತ್ತು ಸಂಸ್ಕೃತಿಯ ಬಗ್ಗೆ ಜನರಲ್ಲಿ ನಿರಾಸಕ್ತಿ ಮೂಡುತ್ತಿರುವುದರಿಂದ ಈ ಕಲೆ ಬಗ್ಗೆ ಆಸಕ್ತಿ ಮೂಡಿಸಲು ಇಲಾಖಾವತಿಯಿಂದ ಹೊಸ ಕಾರ್ಯಕ್ರಮಗಳನ್ನೇನಾದರೂ ಹಮ್ಮಿಕೊಳ್ಳಲಾಗಿದೆಯೇ ;

(ಆ) ವಿದ್ಯಾ ಇಲಾಖೆಯ ಸಹಯೋಗದಿಂದ ಪ್ರೌಢ ಶಾಲೆ ಮತ್ತು ಕಾಲೇಜುಗಳಲ್ಲಿ ಪ್ರಸಿದ್ಧ ಗಾಯಕರಿಂದ ಜಾನಪದ ಗೀತೆಗಳ ಗಾಯನ ಕಾರ್ಯಕ್ರಮಗಳನ್ನು ನಡೆಸಿ ಈ ಬಗ್ಗೆ ಆಸಕ್ತಿ ಮೂಡುವಂತೆ ಕಾರ್ಯಕ್ರಮ ರೂಪಿಸಲಾಗುವುದೇ ;

(ಇ) ರಂಗಭೂಮಿ ಕಲೆಯ ಅಭಿವೃದ್ಧಿಗ 'ರಂಗಾಯಣ' ಇರುವಂತೆ ಇದೇ ಮಾದರಿಯಲ್ಲಿ ಜಾನಪದ ಕಲೆಗಳ ಅಭಿವೃದ್ಧಿಗಾಗಿ ಸಂಸ್ಥೆಗಳನ್ನು ಹೊಸದಾಗಿ ಸ್ಥಾಪಿಸಲು ಸರ್ಕಾರ ಯೋಚಿಸುತ್ತದೆಯೇ ;

(ಈ) ಜನಪದ ಗೀತೆಗಳನ್ನು ಕಲಿಸಲು ಮತ್ತು ಪ್ರೋತ್ಸಾಹಿಸಲು ಕಲಿಕಾ ತರಗತಿಗಳನ್ನು ಮತ್ತು ತರಬೇತಿಯನ್ನು ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕ್ರಮ ಕೈಗೊಳ್ಳವುದೇ ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧೪(೫೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಪ್ಯಾರಾಮೆಡಿಕಲ್ ಸಿಬ್ಬಂದಿವರ್ಗದವರ ಕೊರತೆಯಿಂದ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಎಲ್ಲಾ ರೀತಿಯ ವೈದ್ಯರುಗಳ (ಸಾಮಾನ್ಯ, ಹೃದಯ, ಚರ್ಮ, ಪ್ರಸೂತಿ ಇತ್ಯಾದಿ) ಸೌಲಭ್ಯವನ್ನು ಕಲ್ಪಿಸಲಾಗಿದೆಯೇ ;

(ಇ) ಸಾರ್ವಜನಿಕರು ಸರ್ಕಾರಿ ಆಸ್ಪತ್ರೆಗಳಿಗೆ ಬಂದರೆ ಎಲ್ಲಾ ರೀತಿಯ ವೈದ್ಯಕೀಯ ಸೌಲಭ್ಯಗಳು ಸಿಗುವಂತಹ ವ್ಯವಸ್ಥೆ ನಿರ್ಮಾಣವಾಗಿದೆಯೇ ;

(ಈ) ಇಲ್ಲದಿದ್ದರೆ, ಯಾವಾಗ ಮಾಡಲಾಗುವುದು ?

## ಮಂಗಳೂರು ನಗರದಲ್ಲಿ ವಾಹನಗಳ ಮೇಲೆ ಕೆಂಪು, ನೀಲಿ & ಹಳದಿ ಬಣ್ಣದ ಲೈಟ್ ಅಳವಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೪೧೫ (೪೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ನಗರದಲ್ಲಿ ವಾಹನಗಳ ಮೇಲೆ ಕೆಂಪು, ನೀಲಿ ಮತ್ತು ಹಳದಿ ಬಣ್ಣದ ಲೈಟ್‌ಗಳನ್ನು ನಿಯಮ ಬಾಹಿರವಾಗಿ

ಕೆಲವರು ಅಳವಡಿಸುತ್ತಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಇದನ್ನು ತಪ್ಪಿಸಲು ಕೈಗೊಂಡ ಕ್ರಮಗಳೇನು ;

(ಆ) ಯಾವ ಯಾವ ವಾಹನಗಳಿಗೆ ಕೆಂಪು ಲೈಟು ಬಳಸಲು ಅವಕಾಶಗಳಿವೆ ; ಅನಧಿಕೃತವಾಗಿ ಕೆಂಪು ಲೈಟ್ ಅಳವಡಿಸಿದವರ ಮೇಲೆ ಕ್ರಮಕೈಗೊಳ್ಳಲು ಇಲಾಖೆ ಹಿಂಜರಿಯುತ್ತಿರಲು ಕಾರಣಗಳೇನು ;

(ಇ) ಮಂಗಳೂರು ನಗರದ ಆರ್.ಟಿ.ಓ ದಲ್ಲಿ ನೋಂದಾಯಿತ ಕಂಡಕ್ಟರ್‌ಗಳ ಸಂಖ್ಯೆ ಎಷ್ಟು ; ತಿಂಗಳೊಂದಕ್ಕೆ ಎಷ್ಟು ಲೈಸನ್ಸ್‌ಗಳನ್ನು ಯಾವ ಯಾವ ವಿಭಾಗದಲ್ಲಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಮಂಗಳೂರು ನಗರ ಆರ್.ಟಿ.ಓ.ನಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಯಾವ ಯಾವ ಹುದ್ದೆಗಳು ಖಾಲಿ ಇವೆ ; ಈ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವರ್ಷಹೊಂದಕ್ಕೆ ಸಂಗ್ರಹವಾಗುತ್ತಿರುವ ತೆರಿಗೆ ಎಷ್ಟು ; ೨೦೧೫–೧೬ ರಲ್ಲಿ ಸಂಗ್ರಹವಾದ ತೆರಿಗೆ ಎಷ್ಟು ? (ವಿವರ ನೀಡುವುದು)

## ಮಂಗಳೂರು ಪ್ರಾದೇಶಿಕ ಸಾರಿಗೆ ಜಂಟಿ ಆಯುಕ್ತರನ್ನು ನೇಮಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು) :–**

೪೧೬ (೪೭೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಪ್ರಾದೇಶಿಕ ಸಾರಿಗೆ ಜಂಟಿ ಆಯುಕ್ತರ ಕಛೇರಿಗೆ ಅಧಿಕಾರಿಯನ್ನು ನೇಮಿಸದೇ ಇರಲು ಕಾರಣಗಳೇನು ;

ಇದರಿಂದಾಗಿ ಸಾರ್ವಜನಿಕರಿಗೆ ಮತ್ತು ವಾಹನ ಮಾಲೀಕರಿಗೆ ತೊಂದರೆ ಉಂಟಾಗುತ್ತಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ;

(ಆ) ಮಂಗಳೂರು ಪ್ರಾದೇಶಿಕ ಸಾರಿಗೆ ಅವರಣದಲ್ಲಿ ವಾಹನ ತಪಾಸಣೆ ಪರವಾನಿಗೆಗಾಗಿ ಹಾಗೂ ಇನ್ನಿತರ ಕೆಲಸ ಕಾರ್ಯಗಳಿಗಾಗಿ ವಾಹನಗಳ ಆಗಮಿಸುತ್ತಿರುವುದರಿಂದ ಟ್ರಾಫಿಕ್ ಜಾಮ್ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇದನ್ನು ಸರಿಪಡಿಸಲು ಇಲಾಖೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಆರ್.ಟಿ.ಓ ಕಛೇರಿಯನ್ನು ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಪ್ರಸ್ತುತ ಮಂಗಳೂರು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ತಿಂಗಳೊಂದಕ್ಕೆ ನೋಂದಾವಣೆಗೊಳ್ಳುವ ಒಟ್ಟು ವಾಹನಗಳ ಸಂಖ್ಯೆ ಎಷ್ಟು ? (ತಿಂಗಳೊಂದಕ್ಕೆ ಸಿ.ಸಿ. ಗೆ ಅನುಗುಣವಾಗಿ ವಿವರ ನೀಡುವುದು)

## ನರ್ಮ್ ಯೋಜನೆಯಲ್ಲಿ ಮಂಗಳೂರು ನಗರಕ್ಕೆ ಬಸ್ಸುಗಳು ಮಂಜೂರು ಮಾಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು)** :–

೪೧೭ (೪೬೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನರ್ಮ್ (NARUM) ಯೋಜನೆಯಲ್ಲಿ ಮಂಗಳೂರು ನಗರಕ್ಕೆ ಎಷ್ಟು ಬಸ್ಸುಗಳನ್ನು ನೀಡಲಾಗಿದೆ ; ಮಂಜೂರಾಗಿರುವ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ಹಳೆ ಬಸ್ಸುಗಳನ್ನು ಮಂಗಳೂರು ನಗರಕ್ಕೆ ನರ್ಮ್ ಯೋಜನೆಯಡಿಯಲ್ಲಿ ನೀಡಲು ಕಾರಣಗಳೇನು ; ನರ್ಮ್ ಬಸ್ಸು ಯೋಜನೆಗಾಗಿ ಕೇಂದ್ರ ಸರಕಾರ ಬಿಡುಗಡೆಗೊಳಿಸಿರುವ ಅನುದಾನ ಎಷ್ಟು ;

(ಇ) ನರ್ಮ್ ಬಸ್ಸುಗಳ ರಹದಾರಿ (Permitt) ನೀಡುವ ಸಂದರ್ಭದಲ್ಲಿ ಯಾವ ಮಾನದಂಡವನ್ನು ಇಟ್ಟುಕೊಳ್ಳಲಾಗಿದೆ ; ಯಾವ ಯಾವ ಪ್ರದೇಶಗಳಿಗೆ ನರ್ಮ್ ಬಸ್ಸುಗಳನ್ನು ಓಡಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ಮಂಗಳೂರು ನಗರದಲ್ಲಿ ನರ್ಮ್ ಬಸ್ಸುಗಳು ಓಡಿಸಲು ಜನರಿಂದ ಹೆಚ್ಚಿನ ಬೇಡಿಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಮಾರ್ಗಗಳಲ್ಲಿ ಓಡಿಸಲಾಗುವುದು ? (ವಿವರ ನೀಡುವುದು)

## ಮಂಗಳೂರಿನಲ್ಲಿ ಅಂಬೇಡ್ಕರ್ ಭವನ ಕಟ್ಟಡದ ಕಾಮಗಾರಿಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು) :-**

೪೧೮ (೪೭೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರಿನಲ್ಲಿ ಅಂಬೇಡ್ಕರ್ ಭವನ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಲು ಇಲಾಖೆ ಕ್ರಮಕೈಗೊಳ್ಳದೆ ಇರಲು ಕಾರಣಗಳೇನು ; ಮಂಗಳೂರಿನಲ್ಲಿ ಅಂಬೇಡ್ಕರ್ ಭವನ ಸ್ಥಾಪಿಸಲು ಎಷ್ಟು ಭೂಮಿಯನ್ನು ಗುರುತಿಸಲಾಗಿದೆಯೇ ; ಎಷ್ಟು ಹಣವನ್ನು

ಮೀಸಲಿಡಲಾಗಿದೆ ; ಯಾವ ಹಂತದಲ್ಲಿದೆ ; (ವಿವರ ನೀಡುವುದು) ಅಂಬೇಡ್ಕರ್ ಭವನ ಪ್ರಸ್ತಾವನೆಯು ಎಂದು ಸ್ಥಾಪಿಸಲಾಗಿತ್ತು ;

(ಆ) ೨೦೧೫–೧೬ರಲ್ಲಿ ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಎಷ್ಟು ಸಮುದಾಯ ಭವನಗಳನ್ನು ನಿರ್ಮಾಣ ಮಾಡಲಾಗಿದೆ ; ಇವುಗಳಲ್ಲಿ ಪೂರ್ಣಗೊಂಡಿರುವ ಹಾಗೂ ಪೂರ್ಣಗೊಳ್ಳದೇ ಇರುವುದು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೨೦೧೫ ರಿಂದ ಇಲ್ಲಿಯವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ನೀಡಿದ ಅನುದಾನ ಎಷ್ಟು; ಯಾವ ಯಾವ ಉದ್ದೇಶಕ್ಕಾಗಿ ನೀಡಲಾಗಿದೆ ? (ವಿವರ ನೀಡುವುದು)

## ಅಲೆಮಾರಿ / ಅರೆ ಅಲೆಮಾರಿ ಜನಾಂಗಕ್ಕೆ ಮನೆಗಳನ್ನು ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೧೯ (೫೩೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲೆಮಾರಿ / ಅರೆ ಅಲೆಮಾರಿ ಕುಟುಂಬಗಳಿಗೆ ೨೦೧೬–೧೭ನೇ ಸಾಲಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮನೆಗಳನ್ನು ವಿತರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ೨೦೧೬–೧೭ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆಗೆ ಎಷ್ಟು ಮನೆಗಳನ್ನು ನೀಡಲಾಗುವುದು ?

# ಬುದ್ಧಿಮಾಂದ್ಯ ಮಕ್ಕಳಿಗಾಗಿ ಶಾಲೆ ನಡೆಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೨೦ (೫೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದಿಂದ ಅನುದಾನ ಪಡೆದು ಬುದ್ಧಿಮಾಂದ್ಯ ಮಕ್ಕಳಿಗಾಗಿ ಶಾಲೆ ನಡೆಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ (ಎನ್.ಜಿ.ಓ) ಸಂಖ್ಯೆ ಎಷ್ಟು; ಈ ಸಂಸ್ಥೆಗಳ ವಿವರ ನೀಡುವುದು ;

(ಆ) ಪ್ರತಿ ಸಂಸ್ಥೆಗೆ ಸರ್ಕಾರದಿಂದ ನೀಡುತ್ತಿರುವ ವಾರ್ಷಿಕ ಅನುದಾನವೆಷ್ಟು ;

(ಇ) ಈ ಸಂಸ್ಥೆಗಳನ್ನು ಸಾಮಾಜಿಕ ಲೆಕ್ಕಪರಿಶೋಧನೆಗೆ ಒಳಪಡಿಸಲಾಗಿದೆಯೇ ;

(ಈ) ಒಳಪಡಿಸಿದ್ದಲ್ಲಿ, ಸದರಿ ಲೆಕ್ಕಪರಿಶೋಧನೆಯ ಶಿಫಾರಸ್ಸುಗಳೇನು ; (ವಿವರ ಒದಗಿಸುವುದು)

(ಉ) ಇಲ್ಲವಾದಲ್ಲಿ, ಸಾಮಾಜಿಕ ಲೆಕ್ಕ ಪರಿಶೋಧನೆ ಯಾವಾಗ ಆರಂಭಿಸಲಾಗುವುದು ?

## ರಾಜ್ಯದಲ್ಲಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೨೧ (೫೬೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡುವ ಕಾರ್ಯಕ್ರಮ ಸರ್ಕಾರದ ಮುಂದಿದೆಯೇ ;

(ಆ) ಇದ್ದರೆ, ೨೦೧೫–೧೬ನೇ ಸಾಲಿನಲ್ಲಿ ಹಂಚಿಕೆ ಮಾಡಿರುವ ಹಣವೆಷ್ಟು ;

(ಇ) ಈ ಹಣದಲ್ಲಿ ವೆಚ್ಚ ಮಾಡಲಾಗಿರುವ ಹಣ ಎಷ್ಟು? (ಭೌತಿಕ ಹಾಗೂ ಆರ್ಥಿಕ ವಿವರ ನೀಡುವುದು)

## ರಾಜ್ಯದಲ್ಲಿ ಅಂಗವಿಕಲರಿಗೆ ನೀಡುವ ಮಾಶಾಸನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೨೨ (೫೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗವಿಕಲರಿಗೆ ನೀಡುವ ಮಾಶಾಸನದ ಕುರಿತು ಇರುವ ಮಾನದಂಡಗಳೇನು ;

F-3

(ಆ) ಈ ಮಾಶಾಸನವನ್ನು ಎಷ್ಟು ವರ್ಷಗಳ ಹಿಂದೆ ಪರಿಷ್ಕರಿಸಲಾಗಿದೆ ;

(ಇ) ಈಗ ನೀಡುತ್ತಿರುವ ಮಾಶಾಸನದ ಮೊತ್ತ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅಂಗವಿಕಲರ ಮಾಶಾಸನವನ್ನು ಯಾವಾಗ ಪರಿಷ್ಕರಿಸಲಾಗುವುದು ?

## ಉದ್ಯೋಗಿನಿ ಯೋಜನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೪೨೩ (೫೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಉದ್ಯೋಗಿನಿ" ಯೋಜನೆ ಅಡಿಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ನಿಗದಿಪಡಿಸಲಾಗಿರುವ ಗುರಿ ಎಷ್ಟು; (ಭೌತಿಕ ಹಾಗೂ ಆರ್ಥಿಕ)

(ಆ) ೨೦೧೫–೧೬ನೇ ಸಾಲಿನವರೆಗೆ ಸಾಧಿಸಿರುವ ಪ್ರಗತಿಯ (ಭೌತಿಕ ಹಾಗೂ ಆರ್ಥಿಕ) (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯ ಅನುಷ್ಠಾನದ ಸಾಧಕ–ಬಾಧಕಗಳ ಬಗ್ಗೆ ೩ನೇ ಸಂಸ್ಥೆಯಿಂದ ಮೌಲ್ಯಮಾಪನ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಅದರ ವಿವರ ನೀಡುವುದು ?

## ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ಆಯುಕ್ತರ ವಿರುದ್ಧ ಕ್ರಮ ಜರುಗಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೪ (೬೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗದಲ್ಲಿನ ಹಿರಿಯ ಆಹಾರ ಸುರಕ್ಷತಾ ಅಧಿಕಾರಿಗಳು ಹಾಗೂ ಕಿರಿಯ ಸುರಕ್ಷತಾ ಅಧಿಕಾರಿಗಳು ಇವರು ಸೇವಾ ಜೇಷ್ಠತೆ ಮತ್ತು ಹುದ್ದೆಗಳ ಸಂಬಂಧ ಕರ್ನಾಟಕ ಆಡಳಿತ ನ್ಯಾಯಾಮಂಡಳಿಯಲ್ಲಿ ಪ್ರಕರಣವಿದ್ದರೂ ಸಹಾ ಆಹಾರ ಸುರಕ್ಷತಾ ಆಯುಕ್ತರು, ಹಿರಿಯ ಆಹಾರ ಸುರಕ್ಷತಾ ಅಧಿಕಾರಿಗಳನ್ನು ಮಾತ್ರ ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡುವುದರ ಮೂಲಕ ನ್ಯಾಯಾಂಗ ನಿಂದನೆಗೆ ಅವಕಾಶ ಮಾಡಿಕೊಡಲಾಗಿದ್ದು, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ;

(ಆ) ಉಪನಿರ್ದೇಶಕರು (ಸ್ಕ್ವಾಡ್) ಮತ್ತು ಸಿಬ್ಬಂದಿಗಳು ಇದ್ದರೂ ನೋಡಲ್ ಅಧಿಕಾರಿಗಳ ನೇಮಕಾತಿ ಅವಶ್ಯಕತೆ ಇರುತ್ತದೆಯೇ ; ಸದರಿ ಸ್ಕ್ವಾಡ್‌ರವರಿಗೆ ಈ ನೋಡಲ್ ಅಧಿಕಾರಿಗಳ ಕೆಲಸವನ್ನು ನಿರ್ವಹಿಸುವಂತೆ ಆದೇಶ ಹೊರಡಿಸಬಹುದಲ್ಲವೇ ; ಪ್ರತಿ ಜಿಲ್ಲೆಗೆ ಆರೋಗ್ಯ ಇಲಾಖೆ ವತಿಯಿಂದ ನೋಡಲ್ ಅಧಿಕಾರಿಗಳು ಇದ್ದರೂ ಸದರಿ ಹಿರಿಯ ಆಹಾರ ಸುರಕ್ಷತಾ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಿರುವ ಔಚಿತ್ಯವೇನು ; ಹಿರಿಯ

ಆಹಾರ ಸುರಕ್ಷತಾ ಅಧಿಕಾರಿಗಳು ಪ್ರಭಾರಿ ಅಂಕಿತ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕಡೆ ಯಾರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ ; ಹಿರಿಯ ಆಹಾರ ಸುರಕ್ಷತಾ ಅಧಿಕಾರಿ ಹುದ್ದೆ, ಪ್ರಭಾರಿ ಅಂಕಿತ ಅಧಿಕಾರಿಗಳ ಹುದ್ದೆ ನೋಡಲ್ ಅಧಿಕಾರಿಗಳ ಹುದ್ದೆ ಸೇರಿದಂತೆ ಒಬ್ಬರಿಗೇ ಮೂರು ಹುದ್ದೆಗಳನ್ನು ನೀಡಿದಂತಾಗುವುದಲ್ಲವೇ ; ಈ ರೀತಿ ನೋಡಲ್ ಅಧಿಕಾರಿಗಳ ನೇಮಕಾತಿ ಆದೇಶದಿಂದ ಹಿರಿಯ ಮತ್ತು ಕಿರಿಯ ಆಹಾರ ಸುರಕ್ಷತಾ ಅಧಿಕಾರಿಗಳಲ್ಲಿ ವೈಮನಸ್ಸು ದ್ವೇಷ ಉಂಟಾಗಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗುವುದರಿಂದ ಆದೇಶವನ್ನು ಹಿಂಪಡೆಯಲು ಸರ್ಕಾರಕ್ಕೆ ಏನು ತೊಂದರೆ ಇದೆ ; (ಸಂಪೂರ್ಣ ವಿವರ ಒದಗಿಸುವುದು)

(ಇ) ಸರ್ಕಾರದ ಮಾರ್ಗ ಸೂಚಿಗಳನ್ನು ಹಾಗೂ ಆರೋಗ್ಯ ಸಚಿವರ ಆದೇಶಗಳನ್ನು ಉದ್ದೇಶ ಪೂರ್ವಕವಾಗಿ ಉಲ್ಲಂಘಿಸಿ, ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಪ್ರಭಾರಿ ಅಂಕಿತ ಅಧಿಕಾರಿ ನೇಮಕ ಮತ್ತು ಕೋಲಾರ ಜಿಲ್ಲೆಯ ಬಂಗಾರು ಪೇಟೆಗೆ ಆಹಾರ ಸುರಕ್ಷತಾ ಅಧಿಕಾರಿಯ ನೇಮಕ ಮಾಡಿ, ಈ ಬಗ್ಗೆ ಕೆ.ಎ.ಟಿ ಯಲ್ಲಿನ ಪ್ರಕರಣಕ್ಕೂ, ಸಚಿವರ ಆದೇಶಕ್ಕೂ ಒಂದಕ್ಕೊಂದು ಸಂಬಂಧ ಇಲ್ಲದೆ ಇದ್ದರೂ ಸಂಬಂಧ ಕಲ್ಪಿಸಿ ಸರ್ಕಾರಕ್ಕೆ ತಪ್ಪು ವರದಿ ಸಲ್ಲಿಸಿರುವ ಆಹಾರ ಸುರಕ್ಷತಾ ಆಯುಕ್ತರು ಹಾಗೂ ಅಧೀನ ಸಿಬ್ಬಂದಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ? (ವಿವರ ಒದಗಿಸುವುದು)

## ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೫ (೫೨೩) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯ ಸರ್ಕಾರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉತ್ತಮ ಗುಣಮಟ್ಟದ ಸುಸಜ್ಜಿತ ಪ್ರಥಮ ಚಿಕಿತ್ಸೆ ಪೆಟ್ಟಿಗೆಗಳು ಲಭ್ಯವಿಲ್ಲದೆ ಇರುವುದನ್ನು ಗಮನಿಸಲಾಗಿದೆಯೇ ;

(ಇ) ಕೆಲವು ಖಾಸಗಿ ಸಂಸ್ಥೆಯ ಬಸ್ಸುಗಳಲ್ಲಿ ಈಗಾಗಲೇ ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಸಿ.ಸಿ. ಕ್ಯಾಮರಾವನ್ನು ಅಳವಡಿಸಲಾಗಿದ್ದು ಅದೇ ರೀತ್ಯಾ ಸರ್ಕಾರಿ ಬಸ್ಸುಗಳಲ್ಲಿಯೂ ಅಳವಡಿಸಲು ಇರುವ ತೊಡಕುಗಳೇನು ; ಇದನ್ನು ಎಂದಿನಿಂದ ಜಾರಿಗೊಳಿಸಲಾಗುವುದು ?

## ೨೦೧೫–೧೬ನೇ ಸಾಲಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅನುದಾನ ಬಳಕೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೬ (೫೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫--೧೬ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೋಸ್ಕರ ಕಾಯ್ದಿರಿಸಲಾದ ಅನುದಾನವು ಬಳಕೆಯಾಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೫-೧೬ನೇ ಸಾಲಿನಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿ ಕಾಯ್ದಿರಿಸಿದ ಅನುದಾನವೆಷ್ಟು; (ಇಲಾಖಾವಾರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಗೆ ಕಾಯ್ದಿರಿಸಿದ ಅನುದಾನದಲ್ಲಿ ಒಟ್ಟು ಮಾಡಲಾದ ಅನುದಾನವೆಷ್ಟು; ಮತ್ತು ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಅನುದಾನವು ಬಳಕೆಯಾಗದೆ ಇದ್ದಲ್ಲಿ ಅದಕ್ಕೆ ಕಾರಣಗಳೇನು ; ಯೋಜನೆಯಲ್ಲಿ ಕೈಕೊಳ್ಳುವ ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಬೆಳಗಾವಿ ಜಿಲ್ಲೆಯಲ್ಲಿ ತಜ್ಞ ವೈದ್ಯರ ಕೊರತೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೨೭ (೫೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಬಹುತೇಕ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳಿಲ್ಲದೆ ಇರುವುದರಿಂದ ಬಾಣಂತಿಯರು ಹಾಗೂ ಹಸುಗೂಸುಗಳು ಜೀವ ಕಳೆದುಕೊಂಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ೨೦೧೫-೧೬ ನೇ ಸಾಲಿನಲ್ಲಿ ಹೆರಿಗೆಗಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ದಾಖಲಾದವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅವರಲ್ಲಿ ಹೆರಿಗೆ ತೊಂದರೆಯಿಂದ ಕೊನೆಯುಸಿರೆಳೆದ ಬಾಣಂತಿಯರು ಮತ್ತು ಹಸುಗೂಸುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಆಸ್ಪತ್ರೆಗಳ ವಿವರ ನೀಡುವುದು)

(ಈ) ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಉ) ಆಸ್ಪತ್ರೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

**ಬೆಳಗಾವಿ ಜಿಲ್ಲೆ ಬಸ್ ನಿಲ್ದಾಣಗಳ ಶೌಚಾಲಯಗಳ ಸ್ವಚ್ಛತೆ ಬಗ್ಗೆ**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೮ (೫೮೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎರಡನೇ ರಾಜಧಾನಿ ಎಂದೆನಿಸಿರುವ ಬೆಳಗಾವಿ ಕೇಂದ್ರ ಬಸ್ ನಿಲ್ದಾಣ ಹಾಗೂ ಜಿಲ್ಲಾ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಲಭ್ಯಗಳುಗಳಾದ ಶೌಚಾಲಯಗಳು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆಗಳಿಲ್ಲಿದೆ ಅವ್ಯವಸ್ಥೆಯ ತಾಣವಾಗಿ ಪ್ರಯಾಣಿಕರಿಗೆ ನರಕ ಸದೃಶವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ ಸದರಿ ಮೂಲಭೂತ ಸೌಲಭ್ಯಗಳನ್ನು ಹಾಗೂ ಸಾರ್ವಜನಿಕರಿಗೆ ಭದ್ರತೆ ಒದಗಿಸುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಜಿಲ್ಲೆಯ ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಲಭ್ಯಗಳ ನಿರ್ವಹಣೆಗೆ ಸರಕಾರವು ಬಿಡುಗಡೆ ಮಾಡಿದ ಅನುದಾನವೆಷ್ಟು; ಅದರಲ್ಲಿ ಬಳಕೆಯಾದ ಅನುದಾನವೆಷ್ಟು; ಬಳಕೆಯಾಗದೆ ಇರುವ ಅನುದಾವೆಷ್ಟು; ಅನುದಾನ ಬಳಕೆಯಾಗಿದ್ದರೂ ಕೂಡಾ ಅವ್ಯವಸ್ಥೆಗೆ ಕಾರಣಗಳೇನು ;

(ಈ) ಜಿಲ್ಲೆಯ ಬಸ್ ನಿಲ್ದಾಣಗಳನ್ನು ಸ್ವಚ್ಛವಾಗಿಡುವ ದೃಷ್ಟಿಯಿಂದ ಯಾವ ಕಾಲಮಿತಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ?

## ಕೇಂದ್ರ ಸರ್ಕಾರದ 'ಪ್ರಧಾನಮಂತ್ರಿ ಉಜ್ವಲ್' ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೯(೫೮೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರವು ಗ್ರಾಮೀಣ ಭಾಗದ ಬಡ ಮಹಿಳಾ ಕುಟುಂಬಗಳಿಗೆ ಉಚಿತ ಗ್ಯಾಸ್ ಸಿಲೆಂಡರ್‌ಗಳನ್ನು ನೀಡುವ "ಪ್ರಧಾನಮಂತ್ರಿ ಉಜ್ವಲ್" ಯೋಜನೆಯನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತರುವ ವಿಚಾರ ಸರ್ಕಾರದ ಮುಂದೆ ಇದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು ;

(ಆ) ಹಾಗಿದ್ದಲ್ಲಿ, ಫಲಾನುಭವಿಗಳು ಈ ಯೋಜನೆಯನ್ನು ಪಡೆಯಲು ಸರ್ಕಾರ ನಿಗಧಿಗೊಳಿಸಿರುವ ಮಾನದಂಡಗಳೇನು ?

## ಮಹಿಳೆಯರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರದ ಕ್ರಮಗಳ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೦(೫೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಹಿಳಾ ಸಬಲೀಕರಣದ ಹೆಸರಿನಲ್ಲಿ ಪ್ರತಿ ವರ್ಷ "ಮಹಿಳಾ ದಿನಾಚರಣೆ" ಆಚರಿಸುತ್ತಿದ್ದರೂ ಮಹಿಳೆಯರಿಗೆ ಸಾಮಾಜಿಕ ವ್ಯವಸ್ಥೆಯಲ್ಲಿ ನಿಜವಾಗಿ ಗೌರವ ದೊರೆಯುದೆ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಮಹಿಳೆಯರನ್ನು ಸಮಾಜದಲ್ಲಿ ಗೌರವದಿಂದ ಕಾಣುವಂತೆ ಹಾಗೂ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಈ ವಿಚಾರವಾಗಿ ಕೈಗೊಂಡಿರುವ ಮಹಿಳಾ ಕಾರ್ಯಕ್ರಮಗಳೇನು ?

## ಶ್ರೀ ದೇವರ ದಾಸಿಮಯ್ಯ ಜಯಂತಿ ಆಚರಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):-**

೪೩೧ (೫೮೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಈ ವರ್ಷದಲ್ಲಿ ಶ್ರೀ ದೇವರ ದಾಸಿಮಯ್ಯ ಜಯಂತಿಯನ್ನು ಯಾವ ದಿನಾಂಕದಂದು ಆಚರಿಸಲಾಗುವುದು ;

(ಆ) ರಾಜ್ಯ ಮಟ್ಟದ ಜಯಂತಿಯನ್ನು ದಾಸಿಮಯ್ಯನವರ ಹುಟ್ಟೂರಾದ ಮುದನೂರಿನಲ್ಲಿ ಆಚರಿಸಲು ಸರ್ಕಾರ ಯೋಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಕಾರ್ಯಕ್ರಮದ ರೂಪುರೇಷೆಗಳೇನು ;

(ಈ) ಸಹಸ್ರ ಮಹೋತ್ಸವ ಕಾರ್ಯಕ್ರಮ ಮಾಡಿದನಂತರ ಮುದನೂರಿನಲ್ಲಿ ಶ್ರೀ ದೇವರ ದಾಸಿಮಯ್ಯ ಸರ್ಕಾರಿ ಜಯಂತಿಯನ್ನು ಆಚರಿಸಲು ಸಿದ್ಧತೆ ನಡೆದಿದೆಯೇ ;

(ಉ) ರಾಜ್ಯದ ಎಲ್ಲಾ ಜಿಲ್ಲೆ–ತಾಲ್ಲೂಕುಗಳಲ್ಲಿ ಜಯಂತಿ ಆಚರಿಸಲು ಆದೇಶ ಮಾಡಲಾಗಿದೆಯೇ ?

## ಕನ್ನಡಗರಿಗೆ ಮೊದಲ ಆದ್ಯತೆ ನೀಡುವಂತೆ ಕೋರಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೪೩೨ (೫೮೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಹುತೇಕ ಕಂಪನಿಗಳು ಸರ್ಕಾರದಿಂದ ಅನುಕೂಲ ಪಡೆದು ಕಾರ್ಯ ನಿರ್ವಹಿಸುತ್ತಿರುವುದು ನಿಜವಲ್ಲವೇ ;

(ಆ) ಹಾಗಿದ್ದಲ್ಲಿ, ಕನ್ನಡಿಗರ ನೆಲದಲ್ಲಿ ಕೆಲಸ ಮಾಡುತ್ತಿರುವ ಈ ಕಂಪನಿಗಳಿಗೆ ಕೆಲಸಕ್ಕೆಂದು ಕನ್ನಡಿಗರ ಮಕ್ಕಳು ಕೆಲಸ ಕೇಳಿದಾಗ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹೆಚ್ಚಿನ ಅಂಕ ಹಾಗೂ ಅನುಭವವಿದ್ದರೂ ನಿರಾಕರಿಸುತ್ತಿರುವ ಈ ಕಂಪನಿಗಳಿಗೆ ಕಡಿವಾಣ ಹಾಕಲು ಸರ್ಕಾರಕ್ಕೆ ಸಾಧ್ಯವಿಲ್ಲವೇ ;

(ಈ) ಹಾಗಿದ್ದಲ್ಲಿ, ಈ ವರ್ಷದ ಅವಧಿಯಲ್ಲಿ ಸರ್ಕಾರ ಸ್ಪಷ್ಟವಾಗಿ ಕನ್ನಡಿಗರಿಗೆ ಮೊದಲ ಆದ್ಯತೆಯೆಂದು ಆದೇಶ ಮಾಡಲಾಗುವುದೇ ?

**ಮಂಚೇನಹಳ್ಳಿ, ನೀರಗುಂದ, ಅಜ್ಜೇನಹಳ್ಳಿಗೆ ಬಸ್ ಬಿಡುವ ಬಗ್ಗೆ**

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೪೩೩ (೫೮೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕು, ಮಂಚೇನಹಳ್ಳಿ, ನೀರಗುಂದ, ಅಜ್ಜೇನಹಳ್ಳಿ ಗ್ರಾಮಗಳಿಗೆ ಹಲವಾರು ವರ್ಷಗಳಿಂದ ಬಸ್ ಸಂಚರಿಸುತ್ತಿದ್ದು ನಿಜವೇ ;

(ಆ) ಕೆಲವು ವರ್ಷಗಳಿಂದ ಈ ಮಾರ್ಗದಲ್ಲಿ ಬಸ್ ಸಂಚಾರ ನಿಲ್ಲಿಸಲು ಕಾರಣವೇನು ;

(ಇ) ಸಂಚಾರ ನಿಲ್ಲಿಸಿರುವುದರಿಂದ ಆ ಭಾಗದ ಪ್ರಯಾಣಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

(ಈ) ಹಾಗಿದ್ದಲ್ಲಿ, ಕೂಡಲೇ ಬಸ್ ಸಂಚಾರ ಪ್ರಾರಂಭ ಮಾಡಿ ಈ ಭಾಗದ ಪ್ರಯಾಣಿಕರಿಗೆ ಅನುಕೂಲ ಮಾಡಲಾಗುವುದೇ ?

## ಹಿಂದುಳಿದ ವರ್ಗಗಳ ಇಲಾಖೆಗೆ ಹೆಚ್ಚು ಅನುದಾನ ಕೋರಿ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೪೩೪ (೫೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಇಲಾಖೆಗೆ ಆಯವ್ಯಯದಲ್ಲಿ ನೀಡಿರುವ ಅನುದಾನವೆಷ್ಟು ;

(ಆ) ಆ ಪೈಕಿ ಬಿಡುಗಡೆ ಮಾಡಿರುವ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ಮೂರು ವರ್ಷದಿಂದ ಎಲ್ಲಾ ಜಿಲ್ಲೆಗಳಿಂದ ಬಂದಿರುವ ಬೇಡಿಕೆ ಎಷ್ಟು ;

(ಈ) ಬೇಡಿಕೆ ಇದ್ದೂ ಹಣ ನೀಡದೆ ಉಳಿಸಿಕೊಂಡಿರುವ ಕಡತಗಳೆಷ್ಟು; ಯಾವ್ಯಾವು ; (ವಿವರ ನೀಡುವುದು)

(ಉ) ಉಳಿಸಿಕೊಂಡಿರುವ ಕಡತಗಳಿಗೆ ಈ ವರ್ಷದ ಆಯವ್ಯಯದಲ್ಲಿ ಪ್ರಥಮ ಆದ್ಯತೆ ಮೇಲೆ ಹಣ ಮಂಜೂರು ಮಾಡಲಾಗುವುದೇ ?

## ತುರುವೇಕೆರೆ ತಾಲ್ಲೂಕು ಅಂಗನವಾಡಿ ಕಟ್ಟಡ ಬಗ್ಗೆ

ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–

೪೩೫ (೫೮೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆ ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳು ಎಷ್ಟು; ಯಾವುವು;

(ಆ) ಬಾಡಿಗೆ ಕಟ್ಟಡ ಹಾಗೂ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು;

(ಇ) ನಿವೇಶನ ನೀಡಿದ್ದರೂ ಅನೇಕ ಅಂಗನವಾಡಿಗಳಿಗೆ ಅನುದಾನ ನೀಡದಿರಲು ಕಾರಣವೇನು;

(ಈ) ಈ ವರ್ಷ ಕಟ್ಟಡಗಳಿಲ್ಲದ ಅಂಗನವಾಡಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದೇ? (ಕಳೆದ ೫ ವರ್ಷಗಳಲ್ಲಿ ಪ್ರತಿ ಅಂಗನವಾಡಿಯಲ್ಲಿ ದಾಖಲಾಗಿ ಸೌಲಭ್ಯ ಪಡೆದಿರುವ ಮಕ್ಕಳ ಸಂಖ್ಯೆ, ಹೆಸರು ಪೂರ್ಣ ವಿವರ ನೀಡುವುದು)

## ಮೂಡಿಗೆರೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಲಭ್ಯವಿರುವ ನಿವೇಶನಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):-**

೪೩೬ (೭೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೂಡಿಗೆರೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಲಭ್ಯವಿರುವ ನಿವೇಶನಗಳ ಸಂಖ್ಯೆ ಎಷ್ಟು; ಲಭ್ಯವಿಲ್ಲದಿದ್ದಲ್ಲಿ ನಿವೇಶನ ಹಂಚಿಕೆಗೆ ಕೈಗೊಂಡ ಕ್ರಮ ಏನು;

(ಆ) ಡಾ॥ ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯಿಂದ ಕೋರಿಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಪಟ್ಟಣ ಪಂಚಾಯಿತಿ ಲೋಕವಳ್ಳಿ ಬಡಾವಣೆಯಲ್ಲಿ ವಾಸಿಸುತ್ತಿರುವ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಜನಸಂಖ್ಯೆ ಎಷ್ಟು ; ಈ ಬಡಾವಣೆಯ ಮೂಲಭೂತ ಸೌಲಭ್ಯ ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿನ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೭ (೫೩೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗಗಳ ಕಲ್ಯಾಣಕ್ಕಾಗಿ ಡಾ|| ಬಿ.ಆರ್. ಅಂಬೇಡ್ಕರ್ ನಿಗಮವು ಹಮ್ಮಿಕೊಂಡಿರುವ ಯೋಜನೆಗಳು ಯಾವುವು;

(ಆ) ಯಾವ ಯಾವ ಜಿಲ್ಲೆಗಳು/ತಾಲ್ಲೂಕುಗಳಲ್ಲಿ ಈ ಅಂಬೇಡ್ಕರ್ ಭವನಗಳನ್ನು ನಿರ್ಮಿಸಲಾಗುತ್ತಿದೆ; (ಜಿಲ್ಲೆ/ತಾಲ್ಲೂಕುಗಳ ವಿವರ ನೀಡುವುದು)

(ಇ) ಸದರಿ ಭವನಗಳ ನಿರ್ಮಾಣಕ್ಕಾಗಿ ಒದಗಿಸಲಾದ ಹಣವೆಷ್ಟು; ಈಗಾಗಲೇ ಎಷ್ಟು ಭವನಗಳನ್ನು ನಿರ್ಮಿಸಲಾಗಿದೆ; ಇನ್ನಿತರೆ ಸ್ಥಳಗಳಲ್ಲಿ ಈ ಭವನಗಳನ್ನು ನಿರ್ಮಿಸಲಾಗುವುದು ಯಾವಾಗ?

## ಮಹಿಳೆಯರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೪೩೮ (೫೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳೆಯರ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯ ಸಬಲೀಕರಣಕ್ಕಾಗಿ ಹಾಗೂ ಅವರಿಗೆ ಸಮಾಜದಲ್ಲಿ ರಕ್ಷಣೆಯನ್ನು ನೀಡಿ, ಮುಖ್ಯ ವಾಹಿನಿಗೆ ತರಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ;

(ಆ) ಈ ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಸಂಬಂಧ ತಾಲ್ಲೂಕುಗಳಲ್ಲಿ ಸ್ತ್ರೀಶಕ್ತಿ ಭವನವನ್ನು ನಿರ್ಮಿಸಲು ಸೂಕ್ತ ನಿವೇಶನ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸ್ತ್ರೀಶಕ್ತಿ ಭವನವನ್ನು ನಿರ್ಮಿಸಲು ಸರ್ಕಾರವು ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಂಡಿರುತ್ತದೆ?

## ರಾಮದುರ್ಗ ತಾಲ್ಲೂಕಿನ ಹಿರೇಕೊಪ್ಪ ಕೆ.ಎಸ್. ಮತ್ತು ತೊರಗಲ್ ಗ್ರಾಮಗಳಲ್ಲಿ ಸಾಂಸ್ಕೃತಿಕ ಭವನ ಕಟ್ಟದ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೩೯ (೪೫೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಹಿರೇಕೊಪ್ಪ ಕೆ.ಎಸ್. ಮತ್ತು ತೊರಗಲ್ ಗ್ರಾಮಗಳಲ್ಲಿ ಸಾಂಸ್ಕೃತಿಕ ಭವನ ಕಟ್ಟಲು ಸರ್ಕಾರ ಆದೇಶ ಮಾಡಿರುವ ಸಂಗತಿ ನಿಜವೇ;

(ಆ) ಹಾಗಿದ್ದಲ್ಲಿ, ಈ ಪ್ರತಿಯೊಂದು ಕೆಲಸಕ್ಕೆ ಹತ್ತು ಲಕ್ಷ ₹ ಬಿಡುಗಡೆ ಮಾಡಲು ಸರ್ಕಾರ ಆದೇಶ ಮಾಡಿರುತ್ತದೆಯೇ; ಸಂಗತಿ ನಿಜವೇ;

(ಇ) ಸರ್ಕಾರ ಆದೇಶದ ಪ್ರಕಾರ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಈ ಕೆಲಸದ ಅಂದಾಜು ವೆಚ್ಚ ಪತ್ರಿಕೆ ತಯಾರಿಸಿ ಸರ್ಕಾರಕ್ಕೆ ಕಳುಹಿಸಲು ಬೆಳಗಾವಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ ಆದೇಶಿಸಿದ ಸಂಗತಿ ನಿಜವೇ;

(ಈ) ಆದೇಶದ ಪ್ರಕಾರ ಬೆಳಗಾವಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು ಭೂಸೇನಾ ನಿಗಮದ ಅಧಿಕಾರಿಗಳ ಮುಖಾಂತರ ಅಂದಾಜು ವೆಚ್ಚ ಪತ್ರಿಕೆ ತಯಾರಿಸಿ ನಿರ್ದೇಶಕರಿಗೆ ಕಳುಹಿಸಿರುವುದು ನಿಜವೇ;

(ಉ) ಹಾಗಿದ್ದಲ್ಲಿ, ಆದೇಶದ ಪ್ರಕಾರ ಇಲ್ಲಿ ಸಾಂಸ್ಕೃತಿಕ ಭವನ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ?

## ಬಿ.ಪಿ.ಎಲ್ ಕಾರ್ಡು ವಿತರಣೆ ಮಾಡುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೦ (೪೫೬) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿರುವ ಬಿ.ಪಿ.ಎಲ್. ಕಾರ್ಡುದಾರರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳಗಾವಿ ಜಿಲ್ಲೆಯಲ್ಲಿ ಬಿ.ಪಿಎಲ್. ಕಾರ್ಡುಗಳನ್ನು ಕೋರಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹೊಸದಾಗಿ ಕಾರ್ಡು ವಿತರಣೆ ಮಾಡುತ್ತಿರುವಲ್ಲಿ ವಿಳಂಬವಾಗುತ್ತಿರುವ ಸಂಗತಿ ನಿಜವೇ;

(ಈ) ಹಾಗಿದ್ದಲ್ಲಿ, ತೀವ್ರಗತಿಯಲ್ಲಿ ಕಾರ್ಡು ವಿತರಣೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು?

## ಬೈಲಹೊಂಗಲ ನಗರದಲ್ಲಿ ಇರುವ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೧ (೪೫೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೈಲಹೊಂಗಲ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು;

F-4

(ಆ) ಹುದ್ದೆಗಳು ಖಾಲಿ ಇರುವುದರಿಂದ ಬಡವರಿಗೆ ಸರ್ಕಾರದಿಂದ ಸಿಗುವ ಸವಲತ್ತುಗಳು ಸಿಗದೇ ಇರುವುದರಿಂದ ತೊಂದರೆ ಅನುಭವಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ:

(ಇ) ಡಯಾಲೀಸಿಸ್ ಮಾಡುವುದನ್ನು ಇನ್ನೂವರೆಗೂ ಪ್ರಾರಂಭಿಸದೇ ಇರುವುದರಿಂದ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

## ಬೆಳಗಾವಿ ವೈದ್ಯಕೀಯ ಕಾಲೇಜಿನಲ್ಲಿ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ಮಾಡುವ ಬಗ್ಗೆ ಹಾಗೂ ಖಾಲಿ ಇರುವ ಹುದ್ದೆಗಳನ್ನು ತುಂಬವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೨ (೪೫೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ನಿರ್ಮಿಸಲಾಗುವುದೇ; ಹಾಗಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; ಈಗ ಅದು ಯಾವ ಹಂತದಲ್ಲಿದೆ;

(ಆ) ಈ ಕೆಲಸಕ್ಕೆ ಬಜೆಟ್ ಪ್ರೊವಿಜನ್ ಮಾಡಲಾಗಿದೆಯೇ;

(ಇ) ಈ ಕಾಲೇಜಿನಲ್ಲಿ ಭೋಧಕ ಹಾಗೂ ಭೋಧಕೇತರ ಎಷ್ಟು ಹುದ್ದೆಗಳು ಖಾಲಿ ಇರುತ್ತವೆ ;

(ಈ) ಇವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ?

## ಬೆಳಗಾವಿ ವಿಭಾಗದಲ್ಲಿ ಪ್ರವಾಸ ತಾಣಗಳಿಗೆ ಹೋಗುವ ಸಾರಿಗೆ ಬಸ್‌ಗಳನ್ನು ಪ್ರಾರಂಭಿಸದೇ ಇರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೪೪೩ (೪೫೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ ವಿಭಾಗದ ಬೈಲಹೊಂಗಲ ಘಟಕದಿಂದ ಶ್ರೀ ಕ್ಷೇತ್ರ ಯಲ್ಲಮ್ಮಗುಡ್ಡದ ಮಾರ್ಗವಾಗಿ ಶ್ರೀ ಕ್ಷೇತ್ರ ಶಿವಯೋಗ ಮಂದಿರಕ್ಕೆ ಹೋಗುವ ಬಸ್ ನಿಲ್ಲಿಸಿದ ಸಂಗತಿ ನಿಜವೇ;

(ಆ) ಪ್ರವಾಸಿ ಕೇಂದ್ರಗಳಿಗೆ ಬಸ್ಸಿನ ಸೌಕರ್ಯ ಒದಗಿಸುವ ಸರ್ಕಾರದ ಉದ್ದೇಶವಿದ್ದರೂ ಖಾಸಗಿ ಬಸ್‌ದವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಬೆಳಗಾವಿ ಹಾಗೂ ಚಿಕ್ಕೊಡಿ ವಿಭಾಗಗಳಲ್ಲಿ ಹೊಸ ಬಸ್ ಸಂಚಾರ ಹಾಗೂ ಪ್ರಾರಂಭಿಸಿದ ಬಸ್‌ಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸದಂತೆ ಕೋರಿದ್ದರೂ ಬಸ್ ಸೌಕರ್ಯ ನಿಲ್ಲಿಸುತ್ತಿರುವ ಸಂಗತಿ ನಿಜವೇ;

(ಇ) ಬೆಳಗಾವಿಯಿಂದ ಹಾಗೂ ಬೈಲಹೊಂಗಲ, ಚಿಕ್ಕೊಡಿಗಳಿಂದ ಯಾವ ಯಾವ ಚುನಾಯಿತ ಪ್ರತಿನಿಧಿಗಳು ಶಿವಯೋಗಮಂದಿರಕ್ಕೆ ಬಸ್ ಪ್ರಾರಂಭಿಸಬೇಕು ಎಂದು ಪತ್ರಗಳನ್ನು ಬರೆದಿರುತ್ತಾರೆ;

(ಈ) ಚುನಾಯಿತ ಪ್ರತಿನಿಧಿಗಳಿಗೆ ಮಾನ್ಯತೆ ನೀಡಿ ಇನ್ನಾದರೂ ಬಸ್ ಸಂಚಾರ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ;

(ಉ) ಬೈಲಹೊಂಗಲ ಘಟಕದಿಂದ ಈ ಮೊದಲು ಹುಬ್ಬಳ್ಳಿಗೆ ಹೋಗುತ್ತಿದ್ದ ಎಷ್ಟು ಬಸ್‌ಗಳನ್ನು ನಿಲ್ಲಿಸಲಾಗಿದೆ; ಬೈಲಹೊಂಗಲ–ಸೊಗಲ ಹಾಗೂ ಸೊಗಲ–ಹುಬ್ಬಳ್ಳಿ ಬಸ್ ನಿಲ್ಲಿಸಿರುವುದು ನಿಜವೇ;

(ಊ) ಬೈಲಹೊಂಗಲ ಘಟಕದಿಂದ ಬೆಂಗಳೂರಿಗೆ ಸೂಪರ್ ಡಿಲಕ್ಸ್ ಬಸ್ ಪ್ರಾರಂಭಿಸಲು ವಿಧಾನ ಪರಿಷತ್ತಿನ ಸದಸ್ಯರು ಕೋರಿದ್ದರೂ ಹಾಗೂ ಸಚಿವರು ಆದೇಶ ನೀಡಿದ್ದರೂ ವಿ.ಆರ್.ಎಲ್. ಸಾಮ್ರಾಟ್ ಇವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಇನ್ನೂವರೆಗೂ ಬಸ್ ಪ್ರಾರಂಭಿಸದೇ ಇದ್ದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಇಲಾಖೆಯವರಿಂದಲೇ ಬೆಳಗಾವಿ ಹಾಗೂ ಚಿಕ್ಕೋಡಿ ವಿಭಾಗಗಳನ್ನು ರಾಜ್ಯದಲ್ಲಿಯೇ ಪ್ರಥಮವಾಗಿ ಖಾಸಗೀಕರಣ ಮಾಡುವ ಉದ್ದೇಶದಿಂದ ಪ್ರಾರಂಭದಲ್ಲಿ ಇರುವ ಬಸ್‌ಗಳನ್ನು ನಿಲ್ಲಿಸುವುದು ವೇಳೆಗೆ ಸರಿಯಾಗಿ ಬಸ್ ಬಿಡದೇ ಇರುವುದು ಹಾಗೂ ಲಾಭದಾಯಕ ರೂಟ್‌ಗಳಲ್ಲಿ ಬಸ್ ಓಡಿಸಲು ವಿನಂತಿಸಿದರೂ ಕ್ರಮ ಕೈಗೊಳ್ಳದೇ ಇರುವ ಸಂಗತಿ ನಿಜವೇ?

## SCP & TSP ಅನುದಾನ ನಿರ್ವಹಣೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೪ (೫೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಸಾಲಿನಲ್ಲಿ SCP & TSP ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನ ವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ೫೦% ಕ್ಕಿಂತಲೂ ಕಡಿಮೆ ಮೊತ್ತ ಖರ್ಚಾಗದೇ ಉಳಿದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ಯೋಜನೆಯಡಿಯಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯ್ತಿ ವ್ಯಾಪ್ತಿಯಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯ್ತಿ ವ್ಯಾಪ್ತಿಯಲ್ಲಿ ಎಷ್ಟು ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಯೋಜನೆಯಡಿಯಲ್ಲಿ ಅನುದಾನ ಬಿಡಗಡೆ ಮಾಡುವಲ್ಲಿ ವಿಳಂಬ ಮಾಡಿದ ಅಧಿಕಾರಿ/ನೌಕರರ ಮೇಲೆ ಯಾವುದಾದರೂ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯ; ಇದ್ದಲ್ಲಿ, ವಿವರ ನೀಡುವುದು ;

(ಉ) ೨೦೧೪-೧೫ ಸಾಲಿನ ಆಯವ್ಯಯದಲ್ಲಿ ಸದರಿ ಯೋಜನೆಗೆ ಮೀಸಲಿಟ್ಟ ಅನುದಾನ ಖರ್ಚಾಗದೆ ಉಳಿದಿರುವ ಅನುದಾನವನ್ನು ಮುಂದಿನ ವರ್ಷಕ್ಕೆ ಮುಂದುವರೆಸಲಾಗುತ್ತಿದೆಯೇ ?

**[illegible] ಭವನಗಳಿಗೆ ಮಂಜೂರಾಗಿರುವ ಅನುದಾನದ [illegible] ಕುರಿತು**

[illegible] ನಾರಾಯಣಸ್ವಾಮಿ [illegible] ಪ್ರಶ್ನೆ:-

[illegible] (೫೪೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ೨೦೧೪-೧೫ನೇ ಸಾಲಿನಲ್ಲಿ ಸಮುದಾಯ ಭವನಗಳ ನಿರ್ಮಾಣಕ್ಕೆ ಒಟ್ಟು ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಮೇಲಿನ ಸಾಲಿನಲ್ಲಿ ಒಟ್ಟು ಮಂಜೂರಾದ ಸಮುದಾಯ ಭವನಗಳೆಷ್ಟು ; (ತಾಲ್ಲೂಕು, ಜಿಲ್ಲಾ ಮತ್ತು ಹೋಬಳಿವಾರು ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಮತ್ತು ಸಮುದಾಯ ಭವನಗಳು ಎಷ್ಟು ; (ಪ್ರತಿ ಸಮುದಾಯ ಭವನಗಳ ಮಾಹಿತಿ ನೀಡುವುದು)

(ಈ) ಸದರಿ ಸಮುದಾಯ ಭವನಗಳ ಕಾಮಗಾರಿಯು ಅತ್ಯಂತ ಕಳಪೆ ಗುಣಮಟ್ಟದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದಲ್ಲಿ, ಎಷ್ಟು ಕಾಮಗಾರಿಗಳು ಕಳಪೆ ಗುಣಮಟ್ಟದಾಗಿದೆ ;

(ಉ) ಸಂಬಂಧಪಟ್ಟ ಗುತ್ತಿಗೆದಾರರ ಮೇಲೆ ಕೈಗೊಂಡಿರುವ ಕ್ರಮಗಳಾವುವು? (ಹೆಸರು ಸಹಿತ ವಿವರ ನೀಡುವುದು)

## ರಿಮ್ಯಾಂಡ್ ಹೋಮ್‌ಗಳ ನಿರ್ವಹಣೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೬ (೫೩೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ರಿಮ್ಯಾಂಡ್ ಹೋಮ್‌ಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ರಿಮ್ಯಾಂಡ್ ಹೋಮ್‌ಗಳ ಸಂಖ್ಯೆ ಎಷ್ಟು; ಅದರಲ್ಲಿರುವ ಬಾಲಾಪರಾಧಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಬಾಲಾಪರಾಧಿ ಕೇಂದ್ರಗಳಲ್ಲಿ ಬಾಲಾಪರಾಧಿಗಳನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಸದರಿ ಕೇಂದ್ರಗಳಲ್ಲಿ ಆಹಾರ ಪದ್ಧತಿಗಳೇನಾದರೂ ಅಳವಡಿಸಲಾಗಿದೆಯೇ ; (ಇದ್ದರೆ, ವಿವರ ತಿಳಿಸುವುದು)

(ಉ) ಬಾಲಾಪರಾಧಿ ಕೇಂದ್ರಗಳಲ್ಲಿ ಮಕ್ಕಳು ಪದೇ ಪದೇ ತಪ್ಪಿಸಿಕೊಂಡು ಹೋಗುತ್ತಿರುವ ಹಿನ್ನೆಲೆಯಲ್ಲಿ ಅಲ್ಲಿನ ನೌಕರರ ಮೇಲೆ ಯಾವುದಾದರೂ ಕ್ರಮ ಕೈಗೊಳ್ಳಲಾಗಿದೆಯೇ? (ಇದಕ್ಕೆ ಕಾರಣಗಳ ಸಹಿತ ಪ್ರಕರಣವಾರು ವಿವರ ನೀಡುವುದು)

## ಹೆಚ್.ಐ.ವಿ. ಪೀಡಿತರ ಕಲ್ಯಾಣ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೭ (೫೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೆಚ್.ಐ.ವಿ. ಪೀಡಿತರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಹೆಚ್.ಐ.ವಿ. ಪೀಡಿತ ಸ್ತ್ರೀ ಮತ್ತು ಪುರುಷರ ಪ್ರಮಾಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಹೆಚ್.ಐ.ವಿ. ಪೀಡಿತ ರೋಗಿಗಳಿಗೆ ಯಾವ ಯಾವ ಕಲ್ಯಾಣ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನ ನಿರ್ವಹಣೆಯಲ್ಲಿ ದುರ್ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ವರ್ಷಾವಾರು ದುರ್ಬಳಕೆಯಾಗಿರುವ ಮೊತ್ತ ಎಷ್ಟು; ಸಂಬಂಧಪಟ್ಟವರ ಮೇಲೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ೧೦೮ ಅಂಬುಲೆನ್ಸ್ ನಿರ್ವಹಣೆ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೪೮ (೫೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೦೮ ಅಂಬುಲೆನ್ಸ್ ಗುತ್ತಿಗೆ ಪಡೆದಿರುವ ಜಿ.ವಿ.ಕೆ. ಕಂಪನಿಯವರಿಗೆ ಕಳೆದ ೩ ವರ್ಷಗಳಲ್ಲಿ ಮಂಜೂರಾದ ಅನುದಾನವೆಷ್ಟು ;

(ಆ) ರಾಜ್ಯದಲ್ಲಿ ಹಾಲಿ ಸುಸ್ಥಿತಿಯಲ್ಲಿರುವ ಒಟ್ಟು ಅಂಬುಲೆನ್ಸ್‌ಗಳ ಸಂಖ್ಯೆ ಎಷ್ಟು ; ಹಾಗೂ ದುಸ್ಥಿತಿಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ೧೦೮ ಅಂಬುಲೆನ್ಸ್ ನೌಕರರ ಹಾಗೂ ಜಿ.ವಿ.ಕೆ. ಸಂಸ್ಥೆಯವರು ಮಾಡಿರುವ ತಪ್ಪುಗಳಿಂದ ಬಡ ರೋಗಿಗಳ ಮೇಲೆ ದುಷ್ಪರಿಣಾಮಗಳಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಉ) ೧೦೮ ಅಂಬುಲೆನ್ಸ್ ನೌಕರರು ಪದೇ ಪದೇ ಮುಷ್ಕರ ಮಾಡುವುದಕ್ಕೆ ಕಾರಣಗಳೇನು ;

(ಊ) ಇದಕ್ಕೆ ಸಂಬಂಧಿಸಿದಂತೆ ಜಿ.ವಿ.ಕೆ. ಸಂಸ್ಥೆಯ ಮೇಲೆ ಯಾವುದಾದರೂ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ ? (ಹಾಗಿದ್ದಲ್ಲಿ ವಿವರ ನೀಡುವುದು)

## ರಾಜ್ಯದಲ್ಲಿನ ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ನಿಯಂತ್ರಿಸುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

[illegible] (೭೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, [illegible] ಹಾಗೂ [illegible]

[illegible]

(ಇ) ದೌರ್ಜನ್ಯ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಈ) ಮಹಿಳೆಯರು ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಸಶಕ್ತರಾಗಲು ಸರ್ಕಾರವು ನೀಡುವ ಉತ್ತೇಜನಗಳಾವುವು ?

## ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕ್ರಿಯಾತ್ಮಕ ದರ ಪದ್ದತಿ ಜಾರಿಗೆ ತಂದಿರುವ ಬಗ್ಗೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು):–**

೪೫೦ (೬೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯನ್ನು ಯಾವಾಗ ಮತ್ತು ಯಾವ ಉದ್ದೇಶಗಳಿಗಾಗಿ ಸ್ಥಾಪಿಸಲಾಯಿತು ;

(ಆ) ಲಾಭಗಳಿಸುವುದು ಸದರಿ ಸಂಸ್ಥೆಯ ಉದ್ದೇಶವೇ;

(ಇ) ಹಾಗಿದ್ದಲ್ಲಿ, ಸದರಿ ಸಂಸ್ಥೆಯನ್ನು ಸ್ಥಾಪನೆ ಮಾಡಿದ ವರ್ಷದಿಂದ ಇಲ್ಲಿಯವರೆಗಿನ ಲಾಭ/ನಷ್ಟವೆಷ್ಟು ; (ವಿವರ ನೀಡುವುದು)

(ಈ) ಪ್ರತಿ ವಾರದ ಕೊನೆಯಲ್ಲಿ ಶನಿವಾರ ಮತ್ತು ಭಾನುವಾರ ಸಾರಿಗೆ ದರಗಳನ್ನು ಹೆಚ್ಚಿಸಲು ಉದ್ದೇಶಿಸಲಾಗಿದೆಯೇ; ಕ್ರಿಯಾತ್ಮಕ ದರ ಪದ್ಧತಿಯನ್ನು ಜಾರಿಗೆ ತರಲಾಗುತ್ತಿದ್ದೆಯೇ; ಈ ಬಗ್ಗೆ ಸ್ಪಷ್ಟ ವಿವರಗಳನ್ನು ನೀಡುವುದು ;

(ಉ) ಸಮರ್ಥ ಸಮ್ಪರ್ಕ ಮಿತವ್ಯಯಕರ ಮತ್ತು ಸೂಕ್ತ ಸಮನ್ವಯತೆ ಸಾಧಿಸುವ ಸಾರಿಗೆ ಸೇವೆಯನ್ನು ನೀಡಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ?

## ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೧ (೪೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಮತ್ತು ಯಾವುವು ;

(ಆ) ಇವುಗಳಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವವು ಎಷ್ಟು ; ಮತ್ತು ಯಾವುವು ; ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವವುಗಳು ಎಷ್ಟು ; ಮತ್ತು ಯಾವುವು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳಿಗೆ ಮಾಸಿಕ ನೀಡುವ ಬಾಡಿಗೆ ಎಷ್ಟು ; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಸ್ಥಳ ಮಂಜೂರಾಗಿಯು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಎಷ್ಟು ; ಮತ್ತು ಯಾವುವು ; ಇವುಗಳು ಇಲ್ಲಿಯ ತನಕ ಸ್ವಂತ ಕಟ್ಟಡಕ್ಕೆ ಸ್ಥಳಾಂತರಗೊಳ್ಳದಿರಲು ಕಾರಣವೇನು ; ಇವುಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುವಂತೆ ಮಾಡಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ?

## ರಾಜ್ಯದಲ್ಲಿನ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿಯನ್ನು ಪಡೆಯಲು ಇರುವ ಮಾನದಂಡಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೨ (೪೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಇರುವ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿಗಳನ್ನು ಪಡೆಯಲು ಇರುವ ಮಾನದಂಡಗಳೇನು ; ಮತ್ತು ಅವುಗಳಿಗೆ ನೀಡುವ ಪಡಿತರ ವ್ಯವಸ್ಥೆಗಳು ಯಾವುವು ; ಮತ್ತು ಅವುಗಳ ಪ್ರಮಾಣವೆಷ್ಟು ;

(ಇ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಮಂಜೂರಾತಿಯಾದ ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ರದ್ದಾದ ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ಮತ್ತು ಅವುಗಳನ್ನು ರದ್ದುಪಡಿಸಲು ಕಾರಣಗಳೇನು ? (ತಿಂಗಳಾವರು ತಾಲ್ಲೂಕುವಾರು ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಪಡಿತರ ಚೀಟಿವಾರು ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ವಿವಿಧ ದರ್ಜೆಯ ಸರ್ಕಾರಿ ಬಸ್ಸುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೩ (೪೬೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ನೂತನವಾಗಿ ಮಂಜೂರುಗೊಂಡ ವಿವಿಧ ದರ್ಜೆಯ ಸರ್ಕಾರಿ ಬಸ್ಸುಗಳು ಎಷ್ಟು ಮತ್ತು ಯಾವುವು ; (ವರ್ಷವಾರು ಜಿಲ್ಲಾವರು ರಹದಾರಿ ವಾರು ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಸಂಚಾರ ನಿಲ್ಲಿಸಲ್ಪಟ್ಟಿರುವ ವಿವಿಧ ದರ್ಜೆಯ ಸರ್ಕಾರಿ ಬಸ್ಸುಗಳು ಎಷ್ಟು ಮತ್ತು ಯಾವುವು ; (ವರ್ಷವಾರು ಜಿಲ್ಲಾವಾರು ರಹದಾರಿವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ವಿವಿಧ ದರ್ಜೆಯ ಸರ್ಕಾರಿ ಬಸ್ಸುಗಳ ಸಂಚಾರವನ್ನು ಸ್ಥಗಿತಗೊಳಿಸಲು ಕಾರಣಗಳೇನು ; ಇವುಗಳ ಸಂಚಾರವನ್ನು ಪುನ: ಪ್ರಾರಂಭಿಸುವ ಯೋಜನೆ ಸರ್ಕಾರ ಮುಂದಿದೆಯೇ ?

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೪ (೪೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಒಟ್ಟು ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಸ್ವಂತ ಕಟ್ಟಡವನ್ನು ಹೊಂದಿ ಅದರಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಿಕೊಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇಲ್ಲವಾದಲ್ಲಿ ಕಾರಣವೇನು ?

## ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೫ (೫೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಡೂರು, ಸಕ್ರಯಾಪಟ್ಟಣ, ಚಿಕ್ಕಮಗಳೂರು, ಮೂಡಿಗೆರೆ, ಬಣಕಲ್, ಕೊಟ್ಟಿಗೆಹಾರ ಮತ್ತು ಬೇಲೂರು, ಚೀಕನಹಳ್ಳಿ, ಗೋಣಿಬಿಡು, ಮೂಡಿಗೆರೆ ಮಾರ್ಗದ ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವ ರಸ್ತೆಯಲ್ಲಿ ಒಟ್ಟು ಎಷ್ಟು ಜಿಲ್ಲಾ ಮತ್ತು ತಾಲ್ಲೂಕು ಪ್ರಾಥಮಿಕ ಆರೋಗ್ಯ ಕೇಂದ್ರ ಆಸ್ಪತ್ರೆಗಳಿವೆ ; (ಆಸ್ಪತ್ರೆವಾರು ಸಿಬ್ಬಂದಿ ಮತ್ತು ಮೂಲಭೂತ ಸೌಕರ್ಯಗಳ ಸಂಪೂರ್ಣ ವಿವರ ನೀಡುವುದು)

(ಆ) ಕೆಲವು ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಎದ್ದು ಕಾಣಿತ್ತಿದ್ದು ಈ ಕುರಿತು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವ ಆಸ್ಪತ್ರೆ/ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಯಾವ ಕಾಲ ಮಿತಿಯಲ್ಲಿ ಈ ಎಲ್ಲಾ ಆಸ್ಪತ್ರೆಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಮತ್ತು ಸಿಬ್ಬಂದಿ ಕೊರತೆಯನ್ನು ನೀಗಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ೧೦೮ ಅಂಬುಲೆನ್ಸ್ ನೌಕರರ ಮುಷ್ಕರ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೫೬ (೫೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೧೦೮ ಅಂಬುಲೆನ್ಸ್ ನೌಕರರು ತಮ್ಮ ಬೇಡಿಕೆಗಳನ್ನು ಇಟ್ಟುಕೊಂಡು ಮುಷ್ಕರ ನಡೆಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ದಿನಗಳಿಂದ ಮುಷ್ಕರ ನಡೆಸುತ್ತಿದ್ದಾರೆ ; ಇವರುಗಳ ಬೇಡಿಕೆಗಳು ಯಾವುವು ;

(ಆ) ೧೦೮ ಅಂಬುಲೆನ್ಸ್ ಸೇವೆಯನ್ನು ಯಾವ ಸಂಸ್ಥೆಯು ಯಾವಾಗಿನಿಂದ ನಡೆಸಿಕೊಂಡು ಬಂದಿದೆ ; ಯಾವ ಅವಧಿಯವರೆಗೆ ಮತ್ತು ಯಾವ ಮಾನದಂಡಗಳನ್ನು ವಿಧಿಸಿ ಗುತ್ತಿಗೆ ನೀಡಲಾಗಿದೆ ; ಗುತ್ತಿಗೆ ನವೀಕರಣದ ನಿಯಮಾವಳಿಗಳೇನು ?

(ಇ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ (ಹುದ್ದೆವಾರು) ಸಂಖ್ಯೆ ಎಷ್ಟು ; ಪ್ರಸ್ತುತ ಎಷ್ಟು ಜನ ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಲಾಗಿದೆ ; ಇದಕ್ಕೆ ಕಾರಣಗಳೇನು ;

(ಈ) ಸಿಬ್ಬಂದಿ ವರ್ಗ ಸಂಸ್ಥೆಯ ನಡುವಿನ ಘರ್ಷಣೆಗೆ ಕಾರಣಗಳೇನು ; ಈ ಘರ್ಷಣೆಯನ್ನು ನಿವಾರಿಸಲು ಹಾಗೂ ಅಮಾನತ್ತುಗೊಂಡ ನೌಕರರನ್ನು ಮರು ಸೇರ್ಪಡಿಸಿಕೊಳ್ಳುವುದಕ್ಕೆ ಹಾಗೂ ನೌಕರರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ತೆಗೆದುಕೊಂಡ ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳೇನು ; (ವಿವರ ನೀಡುವುದು)

(ಉ) ಈ ಸಂಸ್ಥೆಯವರ ವಿರುದ್ಧ ಕ್ರಮಕೈಗೊಂಡು ಬೇರೆ ಸಂಸ್ಥೆಯೊಂದಿಗೆ ಈ ೧೦೮ ಅಂಬುಲೆನ್ಸ್ ಸೇವೆಯನ್ನು ನಡೆಸಲು ಸರ್ಕಾರ ಕ್ರಮ ಕೈಗೊಳ್ಳವುದೆ ; ಅಥವಾ ಸರ್ಕಾರವೇ ಈ ಸಂಸ್ಥೆಯನ್ನು ನಡೆಸಿಕೊಂಡು ಹೋಗುವ ಉದ್ದೇಶ ಹೊಂದಿದೆಯೇ ?

## ಚಿಕ್ಕಮಗಳೂರು ಜಿಲ್ಲೆ ಪ್ರಾಚ್ಯವಸ್ತು ದೇವಸ್ಥಾನಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೭ (೫೩೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ದೇವಸ್ಥಾನಗಳು ಪ್ರಾಚ್ಯವಸ್ತು ಇಲಾಖೆಗೆ ಒಳಪಡುತ್ತವೆ ಆ ಪೈಕಿ ಬಳಕೆಯಾಗಿರುವ ಅನುದಾನ ಎಷ್ಟು ;

(ಆ) ಸದರಿ ದೇವಸ್ಥಾನಗಳ ನಿರ್ವಹಣೆ ಮಾಡಲು ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಶಿಥಿಲಾವಸ್ಥೆಯಲ್ಲಿ ಇರುವ ದೇವಸ್ಥಾನಗಳ ಸಂಖ್ಯೆ ಎಷ್ಟು ; ಅವುಗಳ ನಿರ್ವಹಣೆಗಾಗಿ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಹೊಯ್ಸಳರ ಮೂಲಸ್ಥಾನವಾದ ಅಂಗಡಿಯು ಶಿಥಿಲಾವಸ್ಥೆಯಲ್ಲಿ ಇದ್ದು, ಶ್ರೀ ಚನ್ನಕೇಶವ ದೇವಸ್ಥಾನವನ್ನು ಅಭಿವೃದ್ಧಿಪಡಿಸಲು ಮತ್ತು ನಿರ್ವಹಣೆ ಮಾಡಲು ಕಳೆದ ೩ ವರ್ಷಗಳಿಂದ ಪ್ರಾಚ್ಯವಸ್ತು ಇಲಾಖೆಯಡಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಅನುದಾನ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೮ (೫೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೂಲಕ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ನಿಗಧಿಪಡಿಸಿದ ಬಿಡುಗಡೆ ಮಾಡಿದ ಮತ್ತು ಖರ್ಚಾದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಗಂಗಾಕಲ್ಯಾಣ ಯೋಜನೆಯಡಿ ವೈಯಕ್ತಿಕ ಹಾಗೂ ಸಾಮೂಹಿಕ ಬಾವಿ/ಕೊಳವೆ ಬಾವಿ ಪಂಪ್‌ಸೆಟ್ ಅಳವಡಿಕೆಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವರ್ಷವಾರು ಮಾಹಿತಿ ನೀಡುವುದು)

(ಇ) ಸದರಿ ಆಯ್ಕೆಯಾದ ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸಲಾಗಿದೆಯೇ ಇಲ್ಲವಾದಲ್ಲಿ ಅದಕ್ಕೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಗಂಗಾಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳೆಷ್ಟು ; ಅವರಿಗೆ ಈ ಸೌಲಭ್ಯ ಒದಗಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ? (ಫಲಾನುಭವಿಗಳವಾರು ವಿಳಾಸದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫೯ (೫೩೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಸರಿಯಾದ ರೀತಿಯಲ್ಲಿ ಆಹಾರ ಸರಬರಾಜು ಮಾಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ ; ಸ್ವಂತ ಕಟ್ಟಡಗಳು ಇರುವ ಕೇಂದ್ರಗಳೆಷ್ಟು ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳು ಎಷ್ಟು ; (ವಿವರ ನೀಡುವುದು)

(ಇ) ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತೆಯರು ಮತ್ತು ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುತ್ತದೆ ; (ವಿವರ ನೀಡುವುದು)

(ಈ) ೨೦೧೫–೧೬ನೇ ಸಾಲಿನಲ್ಲಿ ಅಂಗನವಾಡಿ ಕಟ್ಟಡಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ಸದರಿ ಅನುದಾನದಲ್ಲಿ ಚಿಕ್ಕಮಗಳೂರು ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಕಟ್ಟಡಕ್ಕೆ ಬಿಡುಗಡೆಯಾದ ಅನುದಾನವೆಷ್ಟು ; (ವಿವರ ನೀಡುವುದು)

(ಉ) ನಕ್ಸಲ್ ಪೀಡಿತ ಪ್ರದೇಶದ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ನೀಡಲಾಗಿದೆಯೆ ? (ವಿವರ ನೀಡುವುದು)

## ಬಸ್ ಪಾಸ್ ಮಾರಾಟದಲ್ಲಿ ಅವ್ಯವಹಾರ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೪೬೦ (೫೯೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಎಂಟಿಸಿ. ಯಲ್ಲಿ ವೋಲ್ವೋ ಬಸ್ ಪಾಸ್ ಮಾರಾಟದಲ್ಲಿ ಅವ್ಯವಹಾರ ನಡೆದಿರುವುದು ನಿಜವೇ ;

(ಆ) ಸದರಿ ಅವ್ಯವಹಾರದಲ್ಲಿ ಯಾರು ಯಾರು ಶಾಮೀಲಾಗಿರುತ್ತಾರೆ. ಅವರುಗಳ ಮೇಲೆ ಕೈಗೊಂಡಿರುವ ಕ್ರಮವೇನು ; ಆಗಿರುವ ನಷ್ಟವೆಷ್ಟು ; ಆಗಿರುವ ನಷ್ಟವನ್ನು ಭರಿಸುವ ಸಂಬಂಧ ಏನು ಶಿಸ್ತು ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ನೂತನ ಕಂಪ್ಯೂಟರ್ ಸಾಫ್ಟ್‌ವೇರ್ ತಂತ್ರಜ್ಞಾನ ಬಳಸಿ ಮುಂದೆ ಇದೇ ರೀತಿ ನಡೆಯಬಹುದಾದ ಅವ್ಯವಹಾರವನ್ನು ತಡೆಗಟ್ಟಲು ಸಾಧ್ಯವಿಲ್ಲವೇ ;

(ಈ) ಈ ನಿಟ್ಟಿನಲ್ಲಿ ಈ ರೀತಿಯ ಅವ್ಯವಹಾರವನ್ನು ನಿಯಂತ್ರಿಸಲು ಯಾವ ರೀತಿಯ ಹೊಸ ಕ್ರಮ ಕೈಗೊಳ್ಳಲು ಯೋಜಿಸಲಾಗಿದೆ ?

## ಸಾಂಪ್ರದಾಯಿಕ ತರಬೇತಿ ಕೇಂದ್ರ

**ಶ್ರೀ ರಾಮಚಂದ್ರಗೌಡ ( ಪದವೀಧರರ ಕ್ಷೇತ್ರ ) :-**

೪೬೧ (೫೯೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯ ಗದ್ದನಕೇರಿಯಲ್ಲಿ ಬಂಜಾರ ಆರ್ಥಿಕ ಮತ್ತು ಸಾಂಸ್ಕೃತಿಕ ಉತ್ತೇಜನ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಮುಂದಾಗಿರುವುದು ನಿಜವೇ; ಇದಕ್ಕೆ ಎಷ್ಟು ಹಣ ಒದಗಿಸಲಾಗಿದೆ;

(ಆ) ಸಾಂಪ್ರದಾಯಿಕ ತರಬೇತಿಯ ಬದಲಾಗಿ ಫ್ಯಾಷನ್ ತಂತ್ರಜ್ಞಾನ ತರಬೇತಿಯನ್ನು ಸ್ವಂತ ಕಟ್ಟಡ ಇಲ್ಲದಿದ್ದಲ್ಲಿ ಬಾಡಿಗೆ ಕಟ್ಟಡದಲ್ಲಿಯಾದರೂ ಕಾರ್ಯಕ್ರಮ ಅನುಷ್ಠಾನಗೊಳಿಸುವಂತೆ ಆದೇಶಿಸಿರುವುದು ನಿಜವೇ;

(ಇ) ನಿಜವಾಗಿದ್ದಲ್ಲಿ, ಇದುವರೆವಿಗೂ ಎಷ್ಟು ಹಣ ಖರ್ಚಾಗಿರುತ್ತದೆ; ಯಾವ ಕಾರ್ಯಕ್ರಮಗಳನ್ನು ನಡೆಸಲಾಗಿರುತ್ತದೆ; ಎಷ್ಟು ಜನ ಬಂಜಾರ ಜನಾಂಗದವರು ಇದರ ಸಹಾಯ ಪಡೆದಿರುತ್ತಾರೆ?

## ಮಹಿಷಿ ವರದಿ ಪರಿಷ್ಕರಣೆ

**ಶ್ರೀ ರಾಮಚಂದ್ರಗೌಡ ( ಪದವೀಧರರ ಕ್ಷೇತ್ರ ) :-**

೪೬೨ (೫೯೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಷಿ ವರದಿ ಪರಿಷ್ಕರಣೆ ವಿಷಯದಲ್ಲಿ ಸರ್ಕಾರದ ನಿಲುವೇನು;

(ಆ) ಮಹಿಷಿ ವರದಿ ಪರಿಷ್ಕರಣೆ ಮಾಡಬೇಕೆನ್ನುವ ಸಲಹೆ ಬಂದಿರುವುದು ನಿಜವೇ ;

(ಇ) ನಿಜವಾಗಿದ್ದಲ್ಲಿ, ಈ ರೀತಿಯ ಸಲಹೆ ಯಾರಿಂದ ನೀಡಲಾಗಿದೆ; ಪರಿಷ್ಕರಣೆ ಮಾಡಬೇಕೆನ್ನುವ ಸಲಹೆಗೆ ಕಾರಣಗಳೇನು; (ವಿವರ ನೀಡುವುದು)

(ಈ) ಇದಕ್ಕೆ ಸರ್ಕಾರದ ನಿಲುವೇನು; ಸದರಿ ವರದಿಯನ್ನು ಪರಿಷ್ಕರಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು?

## ಆಹಾರ ಪದಾರ್ಥಗಳ ಗುಣಮಟ್ಟ ಪರೀಕ್ಷೆ

**ಶ್ರೀ ರಾಮಚಂದ್ರಗೌಡ ( ಪದವೀಧರರ ಕ್ಷೇತ್ರ ) :–**

೪೬೩ (೫೯೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಹಾರ ಪದಾರ್ಥಗಳ ಗುಣಮಟ್ಟ ಪರೀಕ್ಷೆಗೆ ಯಾವ ರೀತಿಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ;

(ಆ) ಇದುವರೆಗೆ ಕಳೆದ ಎರಡು ವರ್ಷಗಳಲ್ಲಿ ಎಷ್ಟು ಪ್ರಮಾಣದಲ್ಲಿ ಹಾಗೂ ಯಾವ ಯಾವ ಆಹಾರ ಪದಾರ್ಥಗಳಿಗೆ ಕಳಪೆ ಗುಣಮಟ್ಟಕ್ಕಾಗಿ ಯಾರ ಮೇಲೆ ಕ್ರಮ ಕೈಗೊಳ್ಳಲಾಗಿದೆ ;

(ಇ) ಆಹಾರ ಪದಾರ್ಥಗಳ ಗುಣಮಟ್ಟ ಪರೀಕ್ಷಾ ಪ್ರಾಧಿಕಾರ ನಿರ್ಮಿಸುವ ಬಗ್ಗೆ ಸರ್ಕಾರದ ನಿಲುವೇನು?

## **ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆಯಾದ ಅನುದಾನವೆಷ್ಟು**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೪೬೪ (೫೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ೨೦೧೫-೧೬ನೇ ಸಾಲಿನಲ್ಲಿ ಮಂಜೂರಾಗಿರುವ ಬಿಡುಗಡೆಯಾಗಿರುವ ಹಾಗೂ ಬಳಕೆಯಾಗಿರುವ ಅನುದಾನವೆಷ್ಟು;

(ಆ) ಲೆಕ್ಕ ಶೀರ್ಷಿಕೆ ೨೦೧೫-೦೦-೧೦೩-೦-೦೪-೧೦೧ ಗಡಿ ಪ್ರದೇಶಗಳಲ್ಲಿ ಅಭಿವೃದ್ಧಿ ಪ್ರಾಧಿಕಾರದ ಸಹಾಯನುದಾನ (ವೇತನಗಳು) ಅಡಿಯಲ್ಲಿ ಹಂಚಿಕೆಯಾಗಿರುವ ಅನುದಾನವನ್ನು ಪ್ರಾಧಿಕಾರದ ಅಧ್ಯಕ್ಷರ ಹಾಗೂ ಸಿಬ್ಬಂದಿಗಳ ವೇತನ ಹಾಗೂ ಭತ್ಯೆಗಳಿಗೆ ಬಳಕೆ ಮಾಡಿಕೊಳ್ಳದೆ ಸದರಿ ನಿಯಮವನ್ನು ಉಲ್ಲಂಘಿಸಿ ಈ ಅನುದಾನವನ್ನು ಕರ್ನಾಟಕ ಗಡಿ ಪ್ರದೇಶ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಅಧಿಕಾರಿಗಳು ಪ್ರಾಧಿಕಾರದ ಯೋಜನಾ ಕಾರ್ಯಕ್ರಮಗಳಿಗೆ ಬಳಸಿಕೊಂಡಿರುವುದು ಸತ್ಯವೆ;

(ಇ) ವೇತನಗಳಿಗೆ ಮೀಸಲಾಗಿರುವ ಅನುದಾನವನ್ನು ಯೋಜನಾ ಕಾರ್ಯಕ್ರಮಗಳಿಗೆ ಬಳಸಿಕೊಳ್ಳುವ ಸಂಬಂಧ ಆರ್ಥಿಕ ಇಲಾಖೆಯು ಅನುಮತಿ ಪಡೆಯಲಾಗಿದೆಯೇ; (ದಾಖಲೆಗಳೊಂದಿಗೆ ಮಾಹಿತಿ ನೀಡುವುದು ಇಲ್ಲವಾದಲ್ಲಿ ಕಾರಣವೇನು)

(ಈ) ಈ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಏನು ಕ್ರಮ ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ಹಿರಿಯ ಮೋಟಾರು ವಾಹನ ನಿರೀಕ್ಷಕರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತಾರದವರು):-**

೪೬೫ (೫೭೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಮೋಟಾರು ವಾಹನ ನಿರೀಕ್ಷಕರ ಹುದ್ದೆಯಿಂದ ಹಿರಿಯ ಮೋಟಾರು ವಾಹನ ನಿರೀಕ್ಷಕರ ಹುದ್ದೆಗೆ ಬಡ್ತಿ ನೀಡಲು ಜೇಷ್ಠತಾ ಪಟ್ಟಿಯನ್ನು ತಯಾರಿಸಲಾಗಿದೆಯೆ; ಹಾಗಿದ್ದಲ್ಲಿ, ಜೇಷ್ಠತಾ ಪಟ್ಟಿಯನ್ನು ತಯಾರಿಸಿದ್ದು ಯಾವಾಗ ; (ಮಾಹಿತಿ ಒದಗಿಸುವುದು)

(ಆ) ಸದರಿ ಜೇಷ್ಠತಾ ಪಟ್ಟಿಗೆ ಅಗತ್ಯ ಅನುಮೋದನೆ ನೀಡಲಾಗಿದೆಯೇ; ಅನುಮೋದನೆ ನೀಡದಿದ್ದಲ್ಲಿ ಕಾರಣವೇನು;

(ಇ) ಬಡ್ತಿ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಈಗಾಗಲೇ ವಿಳಂಬವಾಗಿರುವ ಹಿನ್ನೆಲೆಯಲ್ಲಿ ಬಡ್ತಿ ನೀಡುವಾಗ ನಿಗದಿತ ಪೂರ್ವಾನ್ವಯದಿಂದ ಜಾರಿಗೆ ಬರುವಂತೆ ಬಡ್ತಿ ನೀಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ವಿವರ ನೀಡುವುದು)

## ಡಾ॥ ಬಿ.ಆರ್. ಅಂಬೇಡ್ಕರ ಅಭಿವೃದ್ಧಿ/ವಾಲ್ಮೀಕಿ ಅಭಿವೃದ್ಧಿ ನಿಗಮಗಳಿಂದ ಜಮೀನು ಮಂಜೂರು ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೪೬೬ (೫೭೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಬಿ.ಆರ್. ಅಂಬೇಡ್ಕರ ಅಭಿವೃದ್ಧಿ ನಿಗಮ/ವಾಲ್ಮೀಕಿ ಅಭಿವೃದ್ಧಿ ನಿಗಮ ದಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮಾಜದವರಿಗೆ ಜಮೀನು ಮಂಜೂರು ಮಾಡಲು ಸರ್ಕಾರವು ವಿಧಿಸಿರುವ ಮಾನದಂಡಗಳೇನು; (ಮಾಹಿತಿ ನೀಡುವುದು)

(ಆ) ಸದರಿ ನಿಗಮಗಳಿಂದ ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಾದ್ಯಂತ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಎಷ್ಟು ಜಮೀನನ್ನು ಯಾವ ಉದ್ದೇಶಕ್ಕಾಗಿ ಮಂಜೂರು ಮಾಡಲಾಗಿದೆ? (ತಾಲ್ಲೂಕುವಾರು, ವರ್ಷವಾರು, ಫಲಾನುಭವಿಗಳ ಹೆಸರು ಮತ್ತು ವಿಳಾಸದ ಸಂಪೂರ್ಣ ವಿವರ ಒದಗಿಸುವುದು)

## ವಿವಿಧ ಯೋಜನೆಗಳಲ್ಲಿ ಬಿಡುಗಡೆ ಮಾಡಿರುವ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೪೬೭ (೫೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಎಲ್ಲಾ ವಿಧಾನ ಸಭಾ ಕ್ಷೇತ್ರಕ್ಕೆ ಕಳೆದ ೨೦೧೩-೧೪, ೨೦೧೪-೧೫ ಮತ್ತು ೨೦೧೫-೧೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು; (ವರ್ಷವಾರು, ಯೋಜನೆವಾರು, ಕ್ಷೇತ್ರವಾರು ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ವಿವರ ನೀಡುವುದು)

(ಇ) ಆ ಪೈಕಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ಮತ್ತು ಯಾವುವು; (ಸ್ಥಳಗಳೊಂದಿಗೆ ಕಾಮಗಾರಿಗಳವಾರು ವಿವರಗಳನ್ನು ನೀಡುವುದು)

(ಈ) ಸದರಿ ವಿವಿಧ ಯೋಜನೆಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು; (ಕಾಮಗಾರಿಗಳ ಹೆಸರು, ಗುತ್ತಿಗೆದಾರರ ವಿವರ ಮತ್ತು ಈ ತನಕ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನದ ವಿವರ ಹಾಗೂ ಬಾಕಿ ಇರುವ ಅನುದಾನದ ಪೂರ್ಣ ವಿವರ ನೀಡುವುದು)

(ಉ) ಬಾಕಿ ಇರುವ ಅನದಾನವನ್ನು ಯಾವ ಕಾಲ ಮಿತಿಯೊಳಗೆ ಬಿಡುಗಡೆ ಮಾಡಲಾಗುವುದು? (ಮಾಹಿತಿ ನೀಡುವುದು)

**ಬೀದರ್ ಜಿಲ್ಲೆಯ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳ ಬಗ್ಗೆ**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೪೬೮ (೫೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳನ್ನೊದಗಿಸಲು ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು; (ತಾಲ್ಲೂಕುವಾರು ಆಸ್ಪತ್ರೆಗಳವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯ ಹೆಚ್ಚುವರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಮೂಲಭೂತ ಸೌಲಭ್ಯಗಳಾದ ಶುದ್ಧ ಕುಡಿಯುವ ನೀರು, ಸ್ವಚ್ಛ ಶೌಚಾಲಯ, ಕುಡಿಯಲು ಬಿಸಿ ನೀರು, ಸ್ವಚ್ಛ ಪರಿಸರ ವ್ಯವಸ್ಥೆಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯವನ್ನು ಕಲ್ಪಿಸದ ಆಸ್ಪತ್ರೆಗಳ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)

## ಮೈಸೂರು ಮಹಾರಾಜರ ಸಮಾಧಿಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೬೯ (೬೧೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮಹಾರಾಜರ ಸಮಾಧಿಗಳಿರುವ ಪ್ರಾಚ್ಯವಸ್ತು ಮಹತ್ವವನ್ನು ಹೊಂದಿರುವ ಸ್ಥಳವನ್ನು ರಾಜ್ಯ ಪ್ರಾಚ್ಯವಸ್ತು ಇಲಾಖೆಯ ವಶಕ್ಕೆ ಪಡೆದು ಅಭಿವೃದ್ಧಿ ಪಡಿಸಲು ಕ್ರಮ ಜರುಗಿಸಲಾಗುವುದೇ;

(ಆ) ಇತ್ತೀಚೆಗೆ ನಿರ್ವಹಣೆ ಇಲ್ಲದೇ ಈ ಸಮಾಧಿಗಳು ಜೀರ್ಣಾವಸ್ಥೆಗೆ ತಲುಪುತ್ತಿರುವುದು ಗಿಡಗಂಟಿಗಳು ಬೆಳೆದು ಬೆಂಕಿಬಿದ್ದು ಈ ಪ್ರದೇಶ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕೇವಲ ಕೃಷ್ಣರಾಜ ಒಡೆಯರ ಹೆಸರು ಹೇಳಿ ಅವರ ಜಯಂತಿ ಆಚರಣೆ ಮಾಡುವುದರ ಜೊತೆಗೆ ಇಂತಹ ಪ್ರಾಚ್ಯವಸ್ತು ಮಹತ್ವದ ಸ್ಥಳವನ್ನು ಇಲಾಖೆಯು ವಶಕ್ಕೆ ಪಡೆದು ಅಭಿವೃದ್ಧಿ ಪಡಿಸಲಾಗುವುದೇ ?

## ಚಾಮರಾಜನಗರ ವೈದ್ಯಕೀಯ ಕಾಲೇಜು ಅನುಮತಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೦ (೬೧೨) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ವೈದ್ಯಕೀಯ ಕಾಲೇಜಿಗೆ ಇಂಡಿಯನ್ ಮೆಡಿಕಲ್ ಕೌನ್ಸಿಲ್‌ನ ಅನುಮತಿ ದೊರಕಿದೆಯೇ; ಪ್ರಸಕ್ತ ವರ್ಷದಿಂದ ಈ ಕಾಲೇಜಿನಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಿಕೊಡಲಾಗುವುದೇ;

(ಆ) ಚಾಮರಾಜನಗರ ವೈದ್ಯಕೀಯ ಕಾಲೇಜಿಗೆ ಸಂಬಂಧಿಸಿದಂತೆ ಇನ್ನೂ ಯಾವ ಯಾವ ಕಟ್ಟಡಗಳು ನಿರ್ಮಾಣವಾಗಬೇಕಾಗಿದೆ; ಕಾಮಗಾರಿಗಳ ಪ್ರಗತಿ ಕಾರ್ಯ ಯಾವ ಹಂತದಲ್ಲಿದೆ? (ವಿವರ ಒದಗಿಸುವುದು)

## ಹೆಗ್ಗಡದೇವನ ಕೋಟೆಗೆ ಕೆ.ಎಸ್.ಆರ್.ಟಿ.ಸಿ. ಬಸ್ ಡಿಪೋದಲ್ಲಿರುವ ಬಸ್‌ಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೧ (೬೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನ ಕೋಟೆಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ಡಿಪೋನಲ್ಲಿ ಇರುವ ಬಸ್‌ಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಹೊಸ ಬಸ್‌ಗಳೆಷ್ಟು; ೫ ವರ್ಷಕ್ಕೂ ಮೆ ಹಳೆಯದಾದ ಬಸ್‌ಗಳ ಸಂಖ್ಯೆ

ಎಷ್ಟು; ಹಳೆಯ ಬಸ್‌ಗಳು ಹೆಚ್ಚು ಹೊಗೆ ಉಗುಳುತ್ತಿದ್ದು, ಪರಿಸರಮಾಲಿನ್ಯ ಉಂಟು ಮಾಡುತ್ತಿರುವುದರ ಜೊತೆಗೆ ಅಲ್ಲಲ್ಲಿ ಕೆಟ್ಟು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹೆಗ್ಗಡದೇವನ ಕೋಟೆ ಡಿಪೋದಿಂದ ಬಸ್‌ಗಳು ಅರಣ್ಯ ಮಾರ್ಗದಲ್ಲಿ ಇರುವ ಹಳ್ಳಿಗಳಿಗೆ, ಇಂಟೀರಿಯರ್ ಹಳ್ಳಿಗಳಿಗೆ ಸಂಚರಿಸಬೇಕಾಗುವುದರಿಂದ ಇವು ಮಾರ್ಗಮಧ್ಯದಲ್ಲಿ ಕೆಟ್ಟು ನಿಲ್ಲದ ಹಾಗೆ ಹೊಸ ಬಸ್‌ಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಒದಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಹೆಚ್.ಡಿ. ಕೋಟೆ ಡಿಪೋ ಮೂಲಕ ಯಾವ ಯಾವ ಹಳ್ಳಿಗಳಿಗೆ ಬಸ್ ಸೌಕರ್ಯ ಕಲ್ಪಿಸಬೇಕೆಂದು ಸಾರ್ವಜನಿಕರಿಂದ ಬೇಡಿಕೆಗಳು ಬಂದಿವೆ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; ಹೆಚ್.ಡಿ. ಕೋಟೆ ತಾಲ್ಲೂಕು ಕಾಡನೂರು ಮತ್ತು ಖಂಡೇಗೌಡನಪುರಗಳಿಗೆ ಬಸ್ ಸೌಲಭ್ಯ ಕಲ್ಪಿಸಿಕೊಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಹಾವೇರಿ ಜಿಲ್ಲೆಯಲ್ಲಿರುವ ಸರ್ಕಾರದ ಹಾಗೂ ಖಾಸಗಿ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೪೭೨ (೪೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯುಲ್ಲಿರುವ ಸರ್ಕಾರದ ಮತ್ತು ಖಾಸಗಿ ಹಾಸ್ಟೇಲ್‌ಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇವುಗಳಲ್ಲಿ ವಾಸಿಸುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; ಹಾಜರಿ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಇವುಗಳಿಗೆ ೨೦೧೫ ಏಪ್ರಿಲ್‌ನಿಂದ ಇಲ್ಲಿಯವರೆಗೆ ಬಿಡುಗಡೆಯಾದ ಹಣವೆಷ್ಟು? (ಹಾಸ್ಟೇಲ್‌ವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿನ ಕೊಳವೆ ಬಾವಿಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೪೭೩ (೪೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ ರಿಂದ ೨೦೧೫-೧೬ರ ವರೆಗೆ ಹಾವೇರಿ ಜಿಲ್ಲೆಯಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು; (ಯೋಜನೆವಾರು, ನಿಗಮವಾರು, ವಿವರಗಳನ್ನು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕೊರೆದ ಕೊಳವೆ ಬಾವಿ ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ, ಮೋಟಾರು, ಪೈಪು ಎಲ್ಲಾ ಸಲಕರಣೆಗಳನ್ನು ಪೂರೈಸಿದ ಸಂಖ್ಯೆ ಎಷ್ಟು; ಪೂರೈಸದೇ ಇರುವ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಸರ್ಕಾರಿ ಆಸ್ಪತ್ರೆ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೪೭೪ (೪೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಹಾಗೂ ಸರಿಯಾದ ಸಲಕರಣೆಗಳಿಲ್ಲದೇ ಬಡ ರೋಗಿಗಳು ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದುವರೆಗೂ ಸರ್ಕಾರದಿಂದ ಕೈಗೊಂಡ ಕ್ರಮವೇನು;

(ಆ) ರಾಜ್ಯದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಸರಿಯಾದ ಚಿಕಿತ್ಸೆ ದೊರೆಯುದೇ ಎಷ್ಟು ಜನ ಬಡ ರೋಗಿಗಳು ಸಾವನ್ನಪ್ಪಿರುತ್ತಾರೆ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯ ಜಿಲ್ಲಾ ಆಸ್ಪತ್ರೆಯಲ್ಲಿ ಸರಿಯಾದ ಮೂಲಭೂತ ಸೌಲಭ್ಯಗಳಿಲ್ಲದೇ ಬಡ ರೋಗಿಗಳು ನೆಲದ ಮೇಲೆ ಮಲಗಿ ಚಿಕಿತ್ಸೆ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ೨೦೧೩ ರಿಂದ ಇಲ್ಲಿಯವರೆಗೆ ಪ್ರತಿ ವರ್ಷ ಮೂಲಭೂತ ಸೌಕರ್ಯಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ?

## ಅಂಗನವಾಡಿಗೆ ವಿತರಿಸುವ ಆಹಾರ ಧಾನ್ಯ ಗುಣಮಟ್ಟದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೪೭೫ (೪೫೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಂಗನವಾಡಿ ಕೇಂದ್ರಗಳಿಗೆ ವಿತರಿಸುವ ಆಹಾರ ಧಾನ್ಯಗಳು ಕಳಪೆ ಮಟ್ಟದಿಂದ ಮತ್ತು ಅಪೌಷ್ಟಿಕತೆಯಿಂದ ಕೂಡಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ಟೀಕೆಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಈ ಆಹಾರ ಧಾನ್ಯಗಳನ್ನು ಯಾವ ಯಾವ ಹೊರ ರಾಜ್ಯಗಳಿಂದ ಮತ್ತು ಯಾವ ಯಾವ ಕಂಪನಿಗಳಿಂದ ಗುತ್ತಿಗೆ ಪಡೆಯಲಾಗಿದೆ; ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ; (ಕಂಪನಿವಾರು ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದ ಪ್ರತಿ ಜಿಲ್ಲೆ ಹಾಗೂ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಆಹಾರ ಧಾನ್ಯ ಮತ್ತು ಪೌಷ್ಟಿಕಾಂಶಗಳನ್ನು ವಿತರಿಸುವ ಗುತ್ತಿಗೆದಾರರು ಯಾರು, ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಮೊತ್ತಕ್ಕೆ ಗುತ್ತಿಗೆ ನೀಡಲಾಗಿದೆ; (ಅವರ ಹೆಸರು ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು)

F-6

(ಈ) ಪ್ರತಿ ಅಂಗನವಾಡಿ ಕೇಂದ್ರಗಳಲ್ಲಿ ಪ್ರತಿ ಮಗುವಿಗೆ ತಿಂಗಳಿಗೆ ಎಷ್ಟು ಆಹಾರ ಧಾನ್ಯ ಹಾಗೂ ಪೌಷ್ಠಿಕಾಂಶಗಳನ್ನು ವಿತರಿಸಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ೨೦೧೩-೧೪ ರಿಂದ ೨೦೧೫-೧೬ರವರೆಗೆ ಭಾಗ್ಯಲಕ್ಷ್ಮಿ ಬಾಂಡ್ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):--**

೪೭೬ (೪೬೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ ರಿಂದ ೨೦೧೫-೧೬ರ ವರೆಗೆ ಹಾವೇರಿ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮಿ ಬಾಂಡ್‌ನ್ನು ಪಡೆಯಲು ಬಂದಿರುವ ಒಟ್ಟು ಅರ್ಜಿಗಳೆಷ್ಟು;

(ಆ) ಇದರಲ್ಲಿ ವಿತರಣೆಯಾಗಿರುವ ಹಾಗೂ ವಿತರಣೆಯಾಗಬೇಕಾಗಿರುವ ಭಾಗ್ಯಲಕ್ಷ್ಮಿ ಬಾಂಡ್ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಬಾಕಿ ಬಾಂಡ್ ವಿತರಿಸದೇ ಇರಲು ಕಾರಣವೇನು; ಎಷ್ಟು ದಿವಸಗಳಲ್ಲಿ ವಿತರಣೆ ಮಾಡಲಾಗುವುದು? (ವಿವರ ನೀಡುವುದು)

## ಶಿರಹಟ್ಟಿಯಲ್ಲಿ ಸಾರಿಗೆ ಬಸ್ ಡಿಪೋ ಪ್ರಾರಂಭಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):-**

೪೭೭ (೬೧೦) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೮-೧೦ ದಿನಗಳಿಂದ ಸಾರ್ವಜನಿಕರು ಗದಗ ಶಿರಹಟ್ಟಿ ತಾಲ್ಲೂಕಾ ಕೇಂದ್ರದಲ್ಲಿ ಸಾರಿಗೆ ಬಸ್ ಡಿಪೋ ಸ್ಥಾಪಿಸಲು ಆಗ್ರಹಿಸಿ ಧರಣಿ ಸತ್ಯಾಗ್ರಹ ರಾಜ್ಯ ಹೆದ್ದಾರಿ ತಡೆ ಅಂತಹ ಹೋರಾಟಗಳನ್ನು ಹಮ್ಮಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ತಪ್ಪು ಮಾಹಿತಿ ನೀಡುತ್ತಿದ್ದಾರೆ ಮತ್ತು ಹೋರಾಟಗಾರರ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ ಎಂದು ಸಾರ್ವಜನಿಕರು ಆರೋಪಿಸುತ್ತಿರುವುದು ನಿಜವೇ;

(ಇ) ಸಾರಿಗೆ ಇಲಾಖೆ ವ್ಯವಸ್ಥಾಪಕ ನಿರ್ದೇಶಕರು ಖುದ್ದಾಗಿ ಹೋರಾಟ ಸ್ಥಳಕ್ಕೆ ಬಂದು ಭೂಮಿ ಖರೀದಿ ಹಾಗೂ ಡಿಪೋ ಸ್ಥಾಪನೆ ಬಗ್ಗೆ ಲಿಖಿತ ಭರವಸೆ ನೀಡುವವರೆಗೆ ಹೋರಾಟ ಹಿಂಪಡೆಯುವುದಿಲ್ಲ ಎಂದು ಪಟ್ಟು ಹಿಡಿದಿರುವ ಸಂಗತಿ ನಿಜವೇ. ಹಾಗಿದ್ದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರಣೆ ನೀಡುವುದು)

## ಕಾರವಾರದಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ):-**

೪೭೮ (೬೦೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರದಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪಿಸಲು ನಿರ್ಣಯ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಆ ನಿರ್ಣಯ ಯಾವಾಗ ಕೈಗೊಳ್ಳಲಾಯಿತು;

(ಆ) ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಲು ಅವಶ್ಯಕ ಇರುವ ಕಾಲೇಜು ಕಟ್ಟಡ ಆಸ್ಪತ್ರೆ ಹಾಗೂ ಮುಂತಾದವುಗಳ ನಿರ್ಮಾಣದ ಕಾರ್ಯ ಸದ್ಯ ಯಾವ ಹಂತದಲ್ಲಿದೆ;

(ಇ) ಈ ವೈದ್ಯಕೀಯ ಮಹಾವಿದ್ಯಾಲಯದ ಸ್ಥಾಪನೆಗೆ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನ ಎಷ್ಟು; ಇಲ್ಲಿಯವರೆಗೆ ಬಿಡುಗಡೆ ಮಾಡಿದ ಮತ್ತು ಖರ್ಚು ಮಾಡಿದ ಹಣ ಎಷ್ಟು; (ವಿವರ ನೀಡುವುದು)

(ಈ) ಮಹಾವಿದ್ಯಾಲಯ ಪ್ರಾರಂಭಿಸಲು ಎಂ.ಸಿ.ಐ. ನವದೆಹಲಿಗೆ ಅರ್ಜಿ ಸಲ್ಲಿಸಲಾಗಿದೆ: ಹಾಗಿದ್ದಲ್ಲಿ, ೨೦೧೬-೧೭ನೇ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲಾಗುವುದೆ?

## ಮೊಬೈಲ್ ಕಂಪನಿಗಳ ಟವರ್‌ಗಳನ್ನು ಅಳವಡಿಸುವಲ್ಲಿ ಅಕ್ರಮ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೭೯ (೫೭೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮೊಬೈಲ್ ಸಂಪರ್ಕ ನೀಡುತ್ತಿರುವ ಮೊಬೈಲ್ ಕಂಪನಿಗಳೆಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಮೊಬೈಲ್ ಸಂಪರ್ಕದ ಸಲುವಾಗಿ ಈ ಕಂಪನಿಗಳು ಅಳವಡಿಸಿರುವ ಟವರ್‌ಗಳೆಷ್ಟು; (ವಿವರ ನೀಡುವುದು) ರಾಜ್ಯದಲ್ಲಿ ಈ ಟವರ್‌ಗಳನ್ನು ನಿರ್ಮಿಸಲು ಇರುವ ನೀತಿ ನಿಬಂಧನೆಗಳು ಏನು (ವಿವರ ನೀಡುವುದು)

(ಇ) ರಾಜ್ಯದಲ್ಲಿ ಮೊಬೈಲ್ ಟವರ್‌ಗಳನ್ನು ಅಳವಡಿಸುವ ವಿಷಯವಾಗಿ ಕಂಪನಿಗಳು ಅಕ್ರಮ ಎಸಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

F-7

## ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ K.S.R.T.C. ಡಿಪೋಗಳಲ್ಲಿರುವ ಹಳೆಯ ಬಸ್ಸುಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೪೮೦ (೫೭೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಸೇರಿದ ಬಸ್ಸುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಖರೀದಿಸಿದ ಹೊಸ ಬಸ್ಸುಗಳ ಸಂಖ್ಯೆ ಎಷ್ಟು;

(ಆ) ಕೊಡಗು ಜಿಲ್ಲೆ ವ್ಯಾಪ್ತಿಯಲ್ಲಿರುವ ಸಾರಿಗೆ ನಿಗಮದ ಡಿಪೋಗಳ ಸಂಖ್ಯೆ ಎಷ್ಟು; ಇವುಗಳ ವಾರ್ಷಿಕ ಆದಾಯ ಮತ್ತು ವೆಚ್ಚ ಎಷ್ಟು; (ವಿವರ ನೀಡುವುದು)

(ಇ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು? (ಹುದ್ದೆವಾರು ವಿವರ ನೀಡುವುದು)

## ಕರ್ನಾಟಕ ಮಧುಮೇಹ ಸಂಸ್ಥೆಯ ಹೆಸರು ಬದಲಾವಣೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೪೮೧ (೪೭೮) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕರ ತೀವ್ರ ವಿರೋಧವಿದ್ದರೂ ಕರ್ನಾಟಕ ಮಧುಮೇಹ ಸಂಸ್ಥೆಯ ಹೆಸರು ಬದಲಾಯಿಸಲು ಸರ್ಕಾರ ಮುಂದಾಗಲು ಕಾರಣವೇನು ;

(ಆ) ಹೆಸರು ಬದಲಾವಣೆಯಿಂದ ಸಂಸ್ಥೆಯ ಮೂಲ ಉದ್ದೇಶಕ್ಕೆ ಧಕ್ಕೆಯಾಗುವುದರೊಂದಿಗೆ ಮಧುಮೇಹ ರೋಗಿಗಳು ಈಗ ಪಡೆಯುತ್ತಿರುವ ಗುಣಮಟ್ಟದ ಸೇವೆಯಿಂದ ವಂಚಿತರಾಗುವುದಿಲ್ಲವೇ ;

(ಇ) ಈ ಸಂಸ್ಥೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಎಷ್ಟು ರೋಗಿಗಳಿಗೆ ಚಿಕಿತ್ಸೆ ನೀಡಲಾಗಿದೆ ಪ್ರತಿದಿನ ಚಿಕಿತ್ಸೆ ಪಡೆಯುತ್ತಿರುವ ಅಂದಾಜು ರೋಗಿಗಳ ಸಂಖ್ಯೆ ಎಷ್ಟು ; ಸಂಸ್ಥೆಯ ನಿರ್ವಹಣೆಗೆ ಸಿಬ್ಬಂದಿಗಳು ಮತ್ತು ವೈದ್ಯಾಧಿಕಾರಿಗಳ ವೇತನ ಸೇರಿದಂತೆ ವರ್ಷಕ್ಕೆ ಬರುವ ವೆಚ್ಚವೆಷ್ಟು ?

## ಹಿರಿಯ ಮಹಿಳಾ ನಾಗರಿಕರ ಆಶ್ರಯ ಕೇಂದ್ರಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೨ (೬೦೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದ ಆಶ್ರಯದಲ್ಲಿ ನಡೆಯುತ್ತಿರುವ ಹಿರಿಯ ಮಹಿಳಾ ಆಶ್ರಯ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಕೇಂದ್ರಗಳಲ್ಲಿ ಆಶ್ರಯ ಪಡೆಯುತ್ತಿರುವ ಹಿರಿಯ ಮಹಿಳೆಯರ ಸಂಖ್ಯೆ ಎಷ್ಟು ;

(ಇ) ಈ ಆಶ್ರಯ ಕೇಂದ್ರಗಳಲ್ಲಿ ಹಿರಿಯ ಮಹಿಳೆಯರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು ;

(ಈ) ಕೆಲವೊಂದು ಆಶ್ರಯ ಕೇಂದ್ರಗಳಲ್ಲಿನ ಹಿರಿಯ ಮಹಿಳೆಯರು ಸರ್ಕಾರ ನೀಡುತ್ತಿರುವ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದು ಸರ್ಕಾರ ಗಮನಿಸಿದೆಯೇ; ಹಾಗಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಪಡಿತರದಲ್ಲಿನ ಅವ್ಯವಹಾರದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೩ (೬೦೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಿಂದ ವಿತರಿಸಲಾದ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಆ) ಬಿ.ಪಿ.ಎಲ್. ಕಾರ್ಡುದಾರರಿಗೆ ಪಡಿತರ ವಿತರಿಸದೆ ಕಾಳ ಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಪ್ರಕರಣಗಳು ಹೆಚ್ಚಾಗಲು ಕಾರಣಗಳೇನು ; ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಳೇನು ?

## ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೪ (೬೦೫) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳೆಷ್ಟು ; ಖಾಸಗಿ ವೈದ್ಯಕೀಯ ಕಾಲೇಜುಗಳೆಷ್ಟು ;

(ಆ) ಸದರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ರಾಜ್ಯ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಹೊರ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಈ ಕಾಲೇಜುಗಳು ಪ್ರಾರಂಭಗೊಳ್ಳಲಿವೆ ? (ವಿವರ ನೀಡುವುದು)

## ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ನಿರುದ್ಯೋಗಿಗಳಿಗೆ ಉದ್ಯೋಗವಕಾಶ ಕಲ್ಪಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೫ (೬೦೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆ ಒಂದು ವರ್ಷದಿಂದ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ನಿರುದ್ಯೋಗಿ ಯುವಕರುಗಳಿಗೆ

ಉದ್ಯೋಗವಕಾಶ ಕಲ್ಪಿಸಲು ಹಮ್ಮಿಕೊಂಡಿರುವ ಯೋಜನೆಗಳಾವುವು ;

(ಆ) ಈ ಒಂದು ವರ್ಷದಲ್ಲಿ ಸದರಿ ಯೋಜನೆಗಳಿಂದ ಅನುಕೂಲ ಪಡೆದ ನಿರುದ್ಯೋಗಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

**ಪ.ಜಾ./ಪ.ಪಂ. ಗಳಿಗೆ ಸ್ಮಶಾನಕ್ಕಾಗಿ ಜಮೀನು ಖರೀದಿ ಕುರಿತು**

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೬ (೫೨೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೨೦೧೬ ನೇ ಸಾಲಿನಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಸ್ಮಶಾನಕ್ಕೆ ಜಮೀನು ಇಲ್ಲದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಭೂಮಿಯನ್ನು ಖರೀದಿಸಿ ನೀಡಲಾಗುವುದೆಂದು ಹಿಂದಿನ ಆಯವ್ಯಯಗಳಲ್ಲಿ ಘೋಷಣೆ ಮಾಡಲಾಗಿತ್ತೆ ;

(ಆ) ಹಾಗಿದ್ದಲ್ಲಿ, ಎಷ್ಟು ಎಕರೆ ಜಮೀನನ್ನು ಇದುವರೆಗೆ ಇಲಾಖೆ ಖರೀದಿಸಿದೆ ಮತ್ತು ಯಾವ ಯಾವ ಗ್ರಾಮಗಳಿಗೆ ಸ್ಮಶಾನ ಇಲ್ಲದಿರುವುದನ್ನು ಇಲಾಖೆ ಗುರುತಿಸಿದೆ ;

(ಇ) ಯಾವ ಯಾವ ಗ್ರಾಮಗಳಿಗೆ ಭೂಮಿಯನ್ನು ಖರೀದಿಸಿ ಸ್ಮಶಾನಕ್ಕಾಗಿ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕೊರೆದಿರುವ ಕೊಳವೆ ಬಾವಿ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೭ (೫೨೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕಳೆದ ೩ ವರ್ಷಗಳಲ್ಲಿ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ೨೦೧೫-೧೬ನೇ ಸಾಲಿನಲ್ಲಿ ಇದುವರೆವಿಗೆ ಕೊರೆದಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಹೀಗೆ ಕೊರದ ಕೊಳವೆ ಬಾವಿಗಳಲ್ಲಿ ಒದಗಿಸಿರುವ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು ; ಹಾಗೂ ವಿದ್ಯುಚ್ಛಕ್ತಿ ಸಂಪರ್ಕವನ್ನು ಕಲ್ಪಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ?

## ದಲಿತ ಮುಖಂಡರ ಸ್ಮಾರಕಗಳನ್ನು ನಿರ್ಮಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೮೮ (೫೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫-೧೬ನೇ ಸಾಲಿನ ಬಜೆಟ್‌ನಲ್ಲಿ ದಲಿತ ಮುಖಂಡರಾದ ದಿವಂಗತ ಶ್ರೀ ಬಿ. ಬಸವಲಿಂಗಪ್ಪ ದಿವಂಗತ ಶ್ರೀ ರಾಚಯ್ಯ ಮತ್ತು ದಿವಂಗತ ಶ್ರೀ ಎನ್. ರಾಚಯ್ಯನವರ ಇವರುಗಳ ಹೆಸರಿನಲ್ಲಿ ಸ್ಮಾರಕ ನಿರ್ಮಾಣ ಮಾಡಲಾಗುವುದೆಂದು ಘೋಷಣೆ ಮಾಡಲಾಗಿತ್ತೇ ;

(ಆ) ಹಾಗಿದ್ದಲ್ಲಿ, ಎಲ್ಲೆಲ್ಲಿ ಈ ದಲಿತ ಮುಖಂಡರ ಹೆಸರಿನಲ್ಲಿ ಸ್ಮಾರಕಗಳನ್ನು ನಿರ್ಮಿಸಲಾಗಿದೆ ?

## ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಬಾಕಿ ಪ್ರಸ್ತಾವನೆಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೯ (೫೨೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವು ಸಮಾಜ ಕಲ್ಯಾಣ ಇಲಾಖೆಯ ಅನುಮತಿ ಕೋರಿ ಕಳುಹಿಸಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಆ ಪೈಕಿ ಬಾಕಿ ಇರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ;

(ಆ) ಹಾಗಿದ್ದಲ್ಲಿ ಸಲ್ಲಿಸಲಾಗಿರುವ ಈ ಪ್ರಸ್ತಾವನೆಗಳು ಯಾವ ಯಾವ ವಿಷಯಕ್ಕೆ ಸಂಬಂಧಪಟ್ಟಿವೆ ;

(ಇ) ಈ ಪ್ರಸ್ತಾವನೆಗಳಿಗೆ ದೀರ್ಘ ಕಾಲದ ಅನುಮತಿ ನೀಡಲು ವಿಳಂಬಕ್ಕೆ ಕಾರಣ ಏನು ; ಈ ವಿಳಂಬದಿಂದಾಗಿ ಅನೇಕ ಯೋಜನೆಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ೨೦೧೫-೧೬ನೇ ಸಾಲಿನಲ್ಲಿ ಎಸ್.ಸಿ./ಎಸ್.ಟಿ. ಗಳಿಗೆ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೯೦ (೬೦೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫-೧೬ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಬಡ ಕುಟುಂಬಗಳಿಗೆ ಗ್ರಾಮೀಣ ಪ್ರದೇಶದಲ್ಲಿ ಮೂವತ್ತೈದು ಸಾವಿರ ಹಾಗೂ ನಗರ ಪ್ರದೇಶದಲ್ಲಿ ಹದಿನೈದು ಸಾವಿರ ನಿವೇಶನಗಳನ್ನು ಹಂಚಿಕೆ ಮಾಡಲಾಗುವುದು ಎಂದು ಘೋಷಣೆ ಮಾಡಲಾಗಿರುವುದು ನಿಜವಲ್ಲವೆ ;

(ಆ) ಹಾಗಿದ್ದಲ್ಲಿ, ಗ್ರಾಮೀಣ ಪ್ರದೇಶ ಮತ್ತು ನಗರ ಪ್ರದೇಶಗಳಲ್ಲಿ ಇದುವರೆವಿಗೆ ಎಷ್ಟು ನಿವೇಶನಗಳನ್ನು ಮಂಜೂರು ಮಾಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೧ (೫೫೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಈ ನಿಲಯಗಳಿಗೆ ಸಮರ್ಪಕವಾದ ಮೂಲಭೂತ ಸೌಕರ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸೌಕರ್ಯವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ನಿಲಯಗಳ ಪೈಕಿ ಸ್ವತಃ ಕಟ್ಟಡದಲ್ಲಿ ಎಷ್ಟು ವಸತಿ ನಿಲಯಗಳು ನಡೆಯುತ್ತಿವೆ ಬಾಡಿಗೆ ಕಟ್ಟಡದಲ್ಲಿ ಎಷ್ಟು ವಸತಿ ನಿಲಯಗಳು ನಡೆಯುತ್ತಿವೆ ? (ವಸತಿ ನಿಲಯವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಪಡಿತರ ಚೀಟಿ ವಿತರಿಸದೇ ಇರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯೨ (೫೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕೆಲವು ಬಡ ಕುಟುಂಬಗಳಿಗೆ ಪಡಿತರ ಚೀಟಿ ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪಡಿತರ ಚೀಟಿಯನ್ನು ವಿತರಿಸದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಪಡಿತರ ಚೀಟಿ ಹೊಂದಿರುವ ಕುಟುಂಬಗಳಿಗೆ ಸಮರ್ಪಕವಾಗಿ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆಯೇ ;

(ಈ) ಆಹಾರ ಪದಾರ್ಥಗಳನ್ನು ವಿತರಣೆ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಕೈಗೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ಕೆಲವು ಹಳ್ಳಿಗಳಿಗೆ ಸಾರಿಗೆ ಸಂಪರ್ಕ ಇಲ್ಲದಿರುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೩ (೫೫೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗಡಿ ಭಾಗದ ಬೀದರ್ ಜಿಲ್ಲೆಯಲ್ಲಿ ಕೆಲವು ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜನ ಸಾಮಾನ್ಯರ ಹಿತದೃಷ್ಟಿಯಿಂದ ಸೌಲಭ್ಯ ಇಲ್ಲದ ಗ್ರಾಮಗಳಿಗೆ ಸಾರಿಗೆ ಸೌಲಭ್ಯಗಳನ್ನು ಒದಗಿಸದಿರಲು ಕಾರಣಗಳೇನು ? (ವಿವರ ನೀಡುವುದು)

## ಡಾ॥ ಡಿ.ಎಂ. ನಂಜುಂಡಪ್ಪ ವರದಿಯ ಅನ್ವಯ ೨೦೧೪-೧೫ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೪ (೫೫೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಡಾ॥ ಡಿ.ಎಂ. ನಂಜುಂಡಪ್ಪ ವರದಿಯ ಅನ್ವಯ ೨೦೧೪-೧೫ ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು, ಇಲಾಖಾವಾರು, ಯೋಜನಾವಾರು ವಿವರ ನೀಡುವುದು)

(ಆ) ಈ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ; ಹಾಗಿದ್ದರೆ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಈ ಯೋಜನೆಯ ಅನುದಾನದಲ್ಲಿ ಕೆಲವು ತಾಲ್ಲೂಕುಗಳಲ್ಲಿ ಕಳಪೆ ಮಟ್ಟದ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಅಸಹಜ ಸಾವುಗಳ ನಿಯಂತ್ರಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೪೯೫ (೪೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷ (೨೦೧೩–೧೪, ೨೦೧೪–೧೫ ಮತ್ತು ೨೦೧೫–೧೬ ಸಾಲು)ಗಳಲ್ಲಿ ಸಂಭವಿಸಿರುವ ಅಸಹಜ ಸಾವುಗಳೆಷ್ಟು ;

(ಆ) ಆ ಪೈಕಿ ವಯೋವೃದ್ಧರು, ಪುರುಷರು, ಮಹಿಳೆಯರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇಂತಹ ಅಸಹಜ ಸಾವುಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಅಧಿಕಾರಿಗಳು ಲಂಚ ಸ್ವೀಕರಿಸುವುದರ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು):–**

೪೯೬ (೫೯೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ತಮ್ಮ ಇಲಾಖೆಯ ಅಡಿಯಲ್ಲಿ ಬರುವ ಅಧಿಕಾರಿಗಳು ಸಾರ್ವಜನಿಕರಿಂದ ಲಂಚ ಪಡೆಯುತ್ತಿದ್ದ ವೇಳೆಯಲ್ಲಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿ

ಬಿದ್ದಿರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಅಧಿಕಾರಿ ಹೆಸರು ಹಾಗೂ ಹುದ್ದೆ ಸಹಿತ ಮಾಹಿತಿ ನೀಡುವುದು)

(ಆ) ಇಂತಹ ಅಧಿಕಾರಿಗಳ ವಿರುದ್ಧ ನ್ಯಾಯಾಲಯದಲ್ಲಿ ನೀಡಿರುವ ತೀರ್ಪುಗಳ ಸಂಖ್ಯೆ ಎಷ್ಟು : ಲೋಕಾಯುಕ್ತ ನ್ಯಾಯಾಲಯದಲ್ಲಿ ಬಾಕಿ ಇರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಕೇಸುಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿನ ಅಂಗನವಾಡಿ ಕೇಂದ್ರಗಳು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) :–**

೪೯೭ (೬೦೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದರಲ್ಲಿ ಸ್ವಂತ ಕಟ್ಟಡ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು)

## ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಇಕ್ಬಾಲ್ ಅಹಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :-**

೪೯೮ (೫೫೯) ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ವೈದ್ಯಕೀಯ ಕಾಲೇಜುಗಳಿವೆ ;

(ಆ) ಸದರಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಬೇಕಾಗುವಂಥ ಎಲ್ಲಾ ರೀತಿಯ ಉಪಕರಣಗಳು ಇವೆಯೇ ;

(ಇ) ಹೊಸ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಎಷ್ಟು ಕಾಲೇಜುಗಳನ್ನು ಪ್ರಾರಂಭಿಸಲು ಚಿಂತನೆ ನಡೆದಿದೆ ? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೯ (೫೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಧಾರವಾಡ ಜಿಲ್ಲೆ, ಹಾವೇರಿ ಜಿಲ್ಲೆ ಹಾಗೂ ಗದಗ ಜಿಲ್ಲೆಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

(ಆ) ಈ ಕೇಂದ್ರಗಳಿಗೆ ಮಂಜೂರಾದ ಅಂಗನವಾಡಿ ಶಿಕ್ಷಕಿ, ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳ ಸಂಖ್ಯೆ ಎಷ್ಟು ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಧಾರವಾಡ ಜಿಲ್ಲೆ, ಹಾವೇರಿ ಜಿಲ್ಲೆ ಹಾಗೂ ಗದಗ ಜಿಲ್ಲೆಗಳಿಗೆ ೨೦೧೫-೧೬ನೇ ಸಾಲಿನಲ್ಲಿ ಮಂಜೂರಾಗಿರುವ ಹೊಸ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಹೊಸ ಕೇಂದ್ರಗಳ ಸ್ಥಾಪನೆಗಾಗಿ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಅಂಗವಿಕಲರಿಗೆ ತ್ರಿಚಕ್ರ ವಾಹನ ವಿತರಿಸುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೦೦ (೫೫೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅಂಗವಿಕಲರು ಸರ್ಕಾರದಿಂದ ತ್ರಿಚಕ್ರ ವಾಹನ ಪಡೆಯಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ೨೦೧೫-೧೬ನೇ ಸಾಲಿನಲ್ಲಿ ರಾಜ್ಯದಲ್ಲಿರುವ ಎಷ್ಟು ಅಂಗವಿಕಲರಿಗೆ ಈವರೆಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ ; ಬಾಕಿ ಉಳಿದಿರುವ ಅರ್ಜಿಗಳೆಷ್ಟು ; ಸದರಿ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲಾಗುವುದು ? (ಜಿಲ್ಲಾವಾರು ವಿವರಗಳನ್ನು ನೀಡುವುದು)

ವಿ. ಶ್ರೀಶ್

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

---

ಕಾ.ಸೂ. ಒ.03694, 1000 ಪ್ರತಿಗಳು ಸ.ಕೇ.ಮು.ಫ-2, ಬೆಂ-59. ದಿನಾಂಕ: 18-03-2016.